# IndiGo ವಿಮಾನದಲ್ಲಿ ಪ್ರಕ್ಷುಬ್ಧತೆ: ಪ್ರಯಾಣಿಕರ ಚೀರಾಟ, ಲ್ಯಾಂಡಿಂಗ್ ವಿಳಂಬ.. ಇಷ್ಟಕ್ಕೂ ಅಗಿದ್ದೇನು




**ನವದೆಹಲಿ,ಜೂ.02–** IndiGo ವಿಮಾನದಲ್ಲಿ ಮತ್ತೆ ಪ್ರಕ್ಷುಬ್ಧತೆ ಉಂಟಾಗಿದ್ದು, ಲ್ಯಾಂಡಿಂಗ್ ವಿಳಂಬವಾಗಿ ವಿಮಾನದಲ್ಲಿದ್ದ ಪ್ರಯಾಣಿಕರು ಚೀರಾಟ ನಡೆಸಿರುವ ವಿಡಿಯೋ ವ್ಯಾಪಕ ವೈರಲ್ ಆಗುತ್ತಿದೆ.

ರಾಯ್‌ಪುರದಿಂದ ದೆಹಲಿಗೆ ಹೋಗುತ್ತಿದ್ದ ಇಂಡಿಗೋ ವಿಮಾನವು ಧೂಳಿನ ಬಿರುಗಾಳಿಯಿಂದಾಗಿ ತೀವ್ರ ಪ್ರಕ್ಷುಬ್ಧತೆಯನ್ನು ಎದುರಿಸಿದ್ದು, ವಿಮಾನ ಲ್ಯಾಂಡ್ ಆಗುವ ಕೊಂಚ ಸಮಯದ ಮೊದಲು ಪೈಲಟ್ ಲ್ಯಾಂಡಿಂಗ್ ಅನ್ನು ಸ್ಥಗಿತಗೊಳಿಸಿದ್ದಾರೆ ಎಂದು ತಿಳಿದು ಬಂದಿದೆ.

ದೆಹಲಿ ವಿಮಾನ ನಿಲ್ದಾಣವನ್ನು ಸಮೀಪಿಸುತ್ತಿದ್ದ 6ಇ 6313 ವಿಮಾನವು ಗಂಟೆಗೆ 80 ಕಿ.ಮೀ ವೇಗದಲ್ಲಿ ಬೀಸುತ್ತಿದ್ದ ಬಲವಾದ ಗಾಳಿಗೆ ಸಿಲುಕಿಕೊಂಡು ಪ್ರಕ್ಷಬ್ಧತೆ ಎದುರಿಸಿತು.

ಗಾಳಿಯಲ್ಲಿ ಹಲವು ಸುತ್ತುಗಳನ್ನು ಸುತ್ತಿದ ನಂತರ ವಿಮಾನವು ದೆಹಲಿ ವಿಮಾನ ನಿಲ್ದಾಣದಲ್ಲಿ ಸುರಕ್ಷಿತವಾಗಿ ಲ್ಯಾಂಡ್ ಆಗಿದೆ. ಆ ಸಮಯದಲ್ಲಿ ಗಾಳಿಯ ವೇಗ ಗಂಟೆಗೆ 80 ಕಿ.ಮೀ.ವರೆಗೆ ಇತ್ತು ಎಂದು ಪೈಲಟ್ ಹೇಳಿದ್ದಾರೆ.

ಗಾಳಿಯ ಪ್ರಕ್ಷುಬ್ಧತೆ ಹಿನ್ನಲೆಯಲ್ಲಿ ಪೈಲಟ್ ವಿಮಾನದ ಲ್ಯಾಡಿಂಗ್ ಅನ್ನು ಮುಂದೂಡಿದರು. ಗಾಳಿಯ ವೇಗ ಕಡಿಮೆಯಾಗುವವರೆಗೂ ವಿಮಾನವನ್ನು ಆಗಸದಲ್ಲೇ ಗಿರಕಿ ಹೊಡೆಸಿದರು. ಬಳಿಕ ಗಾಳಿಯ ವೇಗ ಕಡಿಮೆಯಾಗುತ್ತಲೇ ವಿಮಾನ ಲ್ಯಾಂಡ್ ಮಾಡಿದ್ದಾರೆ ಎನ್ನಲಾಗಿದೆ.

**ಲ್ಯಾಂಡಿಂಗ್ ವೇಳೆ ಟರ್ಬುಲೆನ್ಸ್ ಸಮಸ್ಯೆ**

ಇಂಡಿಗೋ ವಿಮಾನ 6ಇ 6313 ದೆಹಲಿಯ ಇಂದಿರಾ ಗಾಂಧಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಇನ್ನೇನು ಲ್ಯಾಂಡ್ ಆಗಬೇಕು ಅನ್ನುಷ್ಟರಲ್ಲೇ ಟರ್ಬುಲೆನ್ಸ್‌ಗೆ ಸಿಲುಕಿದೆ. ಭಾರಿ ಪ್ರಮಾಣದ ಗಾಳಿ ಮಳೆಯಿಂದ ವಿಮಾನ ಲ್ಯಾಡಿಂಗ್ ಮಾಡಲು ಸಾಧ್ಯವಾಗದ ಪರಿಸ್ಥಿತಿ ಎದುರಾಗಿತ್ತು. ಈ ವೇಳೆ ವಿಮಾನ ನಿಯಂತ್ರಕ್ಕೆ ಸಿಗದೆ ಆಗಸದಲ್ಲೇ ತೇಲಾಡಿದೆ.

ಆಗಸದಿಂದ ಇಳಿಯುತ್ತಿದ್ದಂತೆ ಪರಿಸ್ಥಿತಿ ತೀವ್ರ ಸ್ವರೂಪ ಪಡೆದುಕೊಂಡಿದೆ. ಹವಾಮಾನ ವೈಪರಿತ್ಯದಿಂದ ವಿಮಾನ ಸಂಪೂರ್ಣ ನಿಯಂತ್ರಣ ಕಳೆದುಕೊಳ್ಳುವ ಭೀತಿ ಎದುರಾಗಿತ್ತು. ಹೀಗಾಗಿ ಇಂಡಿಗೋ ಪೈಲೆಟ್ ಸಮಯೋಚಿತ ನಿರ್ಧಾರ ಹಾಗೂ ವಿಮಾನ ನಿಯಂತ್ರಣಕ್ಕೆ ತೆಗೆದುಕೊಂಡು ವಿಮಾನ ಲ್ಯಾಂಡ್ ಮಾಡದೇ ಮತ್ತೆ ಹಾರಿಸಿದ್ದಾರೆ. ವಿಮಾನ ಲ್ಯಾಂಡಿಂಗ್ ಮಾಡದ ಪೈಲೆಟ್ ಮತ್ತೆ ದೆಹಲಿ ವಿಮಾನ ನಿಲ್ದಾಣದ ಸುತ್ತು ಹೊಡೆದಿದ್ದಾರೆ. ಭಾರಿ ಪ್ರಮಾಣದ ಗಾಳಿ ಕಡಿಮೆಯಾಗುವ ವರೆಗೆ ಒಂದೆರೆಡು ಸುತ್ತು ನಿಲ್ದಾಣದ ಸುತ್ತ ಹೊಡೆದಿದ್ದಾರೆ.

**ಪ್ರಯಾಣಿಕರ ಚೀರಾಟ**

ಅತ್ತ ವಿಮಾನದ ಪೈಲಟ್ ವಿಮಾನವನ್ನು ಲ್ಯಾಂಡ್ ಮಾಡಲಾಗದೇ ಹರಸಾಹಸ ಪಡುತ್ತಿದ್ದರೆ ಇತ್ತ ವಿಮಾನದಲ್ಲಿದ್ದ ಪ್ರಯಾಣಿಕರು ಜೀವ ಭಯದಿಂದ ಚೀರಾಟ ನಡೆಸಿದರು. ಪ್ರಯಾಣಿಕರು ಚೀರಾಡುತ್ತಿರುವ ದೃಶ್ಯ, ಪ್ರಾರ್ಥಿಸುತ್ತಿರುವ ದೃಶ್ಯ ಸೆರೆಯಾಗಿದ್ದು, ಈ ವಿಡಿಯೋ ವ್ಯಾಪಕ ವೈರಲ್ ಆಗುತ್ತಿದೆ.

# ಭಾರತದ ವಾಯುಪಡೆಗೆ 'ಆನೆ' ಬಲ: Make-in-India ಅಡಿಯಲ್ಲಿ Su-57E Stealth Beast ಫೈಟರ್ ಜೆಟ್ ಮಾರಾಟಕ್ಕೆ Russia ಆಫರ್!

**ನವದೆಹಲಿ,ಜೂ.02–** 'ಆಪರೇಷನ್ ಸಿಂಧೂರ್' ನಂತರ, ಭಾರತ ಮತ್ತು ಪಾಕಿಸ್ತಾನದ ನಡುವಿನ ಉದ್ವಿಗ್ನತೆ ಮುಂದುವರೆದಿರುವಂತೆಯೇ ಇತ್ತ ರಷ್ಯಾ ತನ್ನ ಅತ್ಯಾಧುನಿಕ Stealth Beast ಫೈಟರ್ ಜೆಟ್ ಖಣ–57ಇ ಯುದ್ಧ ವಿಮಾನವನ್ನು ಭಾರತಕ್ಕೆ ಮಾರಾಟ ಮಾಡುವ ಆಫರ್ ನೀಡಿದೆ.

ಹೌದು.. ಇತ್ತೀಚೆಗೆ ಪಾಕಿಸ್ತಾನಕ್ಕೆ ಚೀನಾ ತನ್ನ 5ನೇ ತಲೆಮಾರಿನ ಜೆ–35 ಯುದ್ಧ ವಿಮಾನ ನೀಡುವುದಾಗಿ ಘೋಷಣೆ ಮಾಡಿರುವಂತೆಯೇ ಅತ್ತ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕೂಡ ಭಾರತಕ್ಕೆ ತನ್ನ ಎಫ್–35 ಫೈಟರ್ ನೀಡುವುದಾಗಿ ಆಫರ್ ನೀಡಿದ್ದರು. ಇದೀಗ ಈ ರೇಸ್ ಗೆ ರಷ್ಯಾ ಕೂಡ ಮುಂದಾಗಿದ್ದು, ರಷ್ಯಾ ತನ್ನ 5ನೇ ತಲೆಮಾರಿನ Su–57E Stealth Beast ಫೈಟರ್ ಜೆಟ್ ನೀಡುವ ಆಫರ್ ನೀಡಿದೆ.

ಅಮೆರಿಕದ ಈ–35 ಯುದ್ಧ ವಿಮಾನಕ್ಕೆ ಸೆಡ್ಡು ಹೊಡೆಯುವ ಸುಖೋಯ್ ಖಗ–57 ಫೈಟರ್ ಜೆಟ್ ಅನ್ನು ಭಾರತಕ್ಕೆ ನೀಡಲು ರಷ್ಯಾ ಮುಂದಾಗಿದ್ದು, ಒಪ್ಪಂದದಲ್ಲಿ ಮೇಕ್ ಇನ್ ಇಂಡಿಯಾ ಕಾನ್ಸೆಪ್ಟ್ ಅನ್ನು ಜಾರಿಗೊಳಿಸುವ ಪ್ರಸ್ತಾಪ ಇಟ್ಟಿದೆ. ಈ ಡೀಲ್ ಅನ್ನು ಭಾರತ ಒಪ್ಪಿಕೊಂಡರೆ, ಇಂಡಿಯಾದ ಏರ್ ಡಿಫೆನ್ಸ್ ಸಾಮರ್ಥ್ಯ ಭಾರೀ ಪ್ರಮಾಣದಲ್ಲಿ ಹೆಚ್ಚುವುದಲ್ಲದೇ ದೇಶೀಯ ರಕ್ಷಣಾ ಉತ್ಪಾದನೆ ಉದ್ಯಮಕ್ಕೂ ಉತ್ತೇಜನ ದೊರೆಯುತ್ತದೆ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

**ರಷ್ಯಾದಿಂದ ಮೇಕ್ ಇನ್ ಇಂಡಿಯಾ ಆಫರ್**

ಇನ್ನು ಈ ಸುಖೋಯ್ 57 ಇ ಯುದ್ಧ ವಿಮಾನವನ್ನು ಭಾರತಕ್ಕೆ ನೀಡುವುದಾಗಿ ಘೋಷಣೆ ಮಾಡಿರುವ ರಷ್ಯಾ ಈ ಅತ್ಯಾಧುನಿಕ ಯುದ್ಧ ವಿಮಾನವನ್ನು ಭಾರತದಲ್ಲೇ ತಯಾರಿಸಲೂ ತಾನು ಸಿದ್ಧ ಎಂದು ಹೇಳಿದೆ ಎನ್ನಲಾಗಿದೆ. ಈ ಸುಖೋಯ್ 57 ಇ 5ನೇ ತಲೆಮಾರಿನ ಸ್ಟೆಲ್ತ್ ಫೈಟರ್ ಜೆಟ್ ಆಗಿದ್ದು, ಭಾರತದಲ್ಲಿಯೇ ನಿರ್ಮಿಸುವ ಪ್ರಸ್ತಾಪವನ್ನು ರಷ್ಯಾ ಸರ್ಕಾರ ಮೋದಿ ಸರ್ಕಾರದ ಮುಂದಿಟ್ಟಿದೆ.

**ರಷ್ಯಾದ ಆಫರ್ ಏನು ಭಾರತಕ್ಕೆ ಏನು ಪ್ರಯೋಜನ**

ಖಗ–57 ಫೈಟರ್ ಜೆಟ್‌ಗಳನ್ನು ಭಾರತದಲ್ಲಿ ತಯಾರಿಸುವ ರಷ್ಯಾದ ಪ್ರಸ್ತಾಪವು ಭಾರತದ ವಾಯು ಶಕ್ತಿ ಮತ್ತು ಸ್ಥಳೀಯ ರಕ್ಷಣಾ ವಲಯವನ್ನು ಬಲಪಡಿಸಲು ಒಂದು ಅನನ್ಯ ಅವಕಾಶವಾಗಿದೆ. ಆದರೆ, ಈ ಯುದ್ಧ ವಿಮಾನದ ವೆಚ್ಚ, ತಂತ್ರಜ್ಞಾನ ವರ್ಗಾವಣೆ ಹಾಗೂ ಕಾರ್ಯಾಚರಣೆಯ ಸಿದ್ಧತೆಗೆ ಸಂಬಂಧಿಸಿದ ಸವಾಲುಗಳನ್ನು ಎಚ್ಚರಿಕೆಯಿಂದ ಪರಿಶೀಲಿಸಬೇಕಾಗಿದೆ. ರಷ್ಯಾದ ಆಫರ್ ಅನ್ನು ಭಾರತ ಒಪ್ಪಿಕೊಂಡರೆ ಇದು ಜಗತ್ತಿನ ಅತ್ಯಂತ ದೊಡ್ಡ ರಕ್ಷಣಾ ಡೀಲ್ ಆಗುವ ಸಾಧ್ಯತೆ ಇದ್ದು, ಐದನೇ ತಲೆಮಾರಿನ ಸ್ಟೆಲ್ತ್ ಫೈಟರ್ ಜೆಟ್‌ಗಳನ್ನು ಉತ್ಪಾದಿಸುವ ರಾಷ್ಟಗಳ ಗುಂಪಿಗೆ ಭಾರತ ಸೇರಲಿದೆ.

ಇನ್ನು, ರಷ್ಯಾ ಭಾರತಕ್ಕೆ ನೀಡಿದ ಆಫರ್‌ನಲ್ಲಿ ಏನೆಲ್ಲಾ ಇದೆ ಎಂಬುದನ್ನು ನೋಡುವುದಾದರೆ, ಭಾರತದ 'ಮೇಕ್ ಇನ್ ಇಂಡಿಯಾ' ಉಪಕ್ರಮದ ಅಡಿಯಲ್ಲಿ ರಷ್ಯಾ ಖಗ–57 ಅನ್ನು ಭಾರತದಲ್ಲೇ ಉತ್ಪಾದಿಸಲಿದೆ ಎಂಬ ಆಫರ್ ಇಟ್ಟಿದೆ.

ಸ್ಥಳೀಯವಾಗಿಯೇ ಖಗ–57 ನಿರ್ಮಾಣ, ಫೈಟರ್ ಜೆಟ್ ತಯಾರಿಕೆಯಲ್ಲಿ ಭಾರತವನ್ನು ಸ್ವಾವಲಂಬಿಯನ್ನಾಗಿ ಮಾಡುವ ಗುರಿಯೊಂದಿಗೆ ತಂತ್ರಜ್ಞಾನ ವರ್ಗಾವಣೆ ಪ್ರಸ್ತಾಪ ಕೂಡ ಮುಂದಿಟ್ಟಿದೆ. ಅಲ್ಲದೆ ಭಾರತಕ್ಕೆ ಬೇಕಾದಂತೆ ಬದಲಾವಣೆ ಮಾಡಿಕೊಳ್ಳಲು ಅವಕಾಶವನ್ನು ನೀಡಲಾಗಿದ್ದು, ಭಾರತ–ಕೇಂದ್ರಿಕೃತ ಫೈಟರ್ ಜೆಟ್‌ಗಳ ತಯಾರಿಕೆಗೆ ಆದ್ಯತೆ ನೀಡಲಾಗುತ್ತದೆ. ಜೊತೆಗೆ ರಷ್ಯಾದಿಂದ ಆಮದು ಮಾಡಿಕೊಳ್ಳುವುದಕ್ಕಿಂತ ಸ್ಥಳೀಯ ಉತ್ಪಾದನೆಯಿಂದ ವೆಚ್ಚ ಕಡಿಮೆಯಾಗಲಿದ್ದು, ಇದರ ಲಾಭ ಭಾರತಕ್ಕೆ ಸಿಗಲಿದೆ ಎಂಬುದನ್ನು ತನ್ನ ಆಫರ್‌ನಲ್ಲಿ ರಷ್ಯಾ ಉಲ್ಲೇಖಿಸಿದೆ ಎಂದು ತಿಳಿದುಬಂದಿದೆ.

**ಅಮೆರಿಕದ ಎಫ್–35ಗೂ ಠಕ್ಕರ್ ನೀಡಲಿದೆ ಖಗ–57 ಯುದ್ಧ ವಿಮಾನ**

ಇನ್ನು ರಷ್ಯಾ ಭಾರತಕ್ಕೆ ನೀಡುವುದಾಗಿ ಘೋಷಣೆ ಮಾಡಿರುವ ಖಗ–57 ಯುದ್ಧ ವಿಮಾನ ರಷ್ಯಾದ ಮೊದಲ ಐದನೇ ತಲೆಮಾರಿನ ಸ್ಟೆಲ್ತ್ ಫೈಟರ್ ಜೆಟ್ ಆಗಿದೆ. ಇದನ್ನು ಅಮೆರಿಕದ ಈ–22 ರಾಪ್ಟರ್ ಮತ್ತು ಈ–35 ಯುದ್ಧ ವಿಮಾನಗಳಿಗೆ ಪೈಪೋಟಿ ನೀಡಲು ಅಭಿವೃದ್ಧಿ ಪಡಿಸಲಾಗಿದೆ. ಈ ಯುದ್ಧ ವಿಮಾನ ಸ್ಟೆಲ್ತ್ ಸಾಮರ್ಥ್ಯಗಳು, ಸುಧಾರಿತ ವಾಯು ತಂತ್ರಜ್ಞಾನ, ಸೂಪರ್‌ಕ್ರೂಸ್ ಸಾಮರ್ಥ್ಯ ಮತ್ತು ಅಪ್‌ಡೇಟೆಡ್ ಸ್ಕಿಲ್‌ಗಳನ್ನು ಹೊಂದಿದ್ದು, ವಿಶ್ವದ ಅತ್ಯಂತ ಬಲಿಷ್ಠ ಹಾಗೂ ಅಪ್‌ಡೇಟೆಡ್ ಯುದ್ಧ ವಿಮಾನಗಳಲ್ಲಿ ಒಂದಾಗಿದೆ.

**ಭಾರತಕ್ಕೆ ಈ ಯುದ್ಧ ವಿಮಾನ ಏಕೆ ಬೇಕು**

ಪ್ರಧಾನಿ ನರೇಂದ್ರ ಮೋದಿ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಭಾರತವು ತನ್ನ ರಕ್ಷಣಾ ಸಾಮರ್ಥ್ಯಗಳನ್ನು ಉನ್ನತೀಕರಣಕ್ಕೆ ವೇಗ ನೀಡಿದೆ. ಅದರಲ್ಲೂ ವಾಯುಪಡೆಯನ್ನು ಆಧುನೀಕರಿಸುತ್ತಿರುವ ಭಾರತಕ್ಕೆ ಫೈಟರ್ ಜೆಟ್‌ಗಳ ಕೊರತೆ ಕಾಡುತ್ತಿದೆ. ಭಾರತದ ಬಳಿ ಸದ್ಯ ರಫೇಲ್ ಫೈಟರ್ ಜೆಟ್ ಇದ್ದು, ಅದು 4.5 ತಲೆಮಾರಿನ ಯುದ್ಧ ವಿಮಾನವಾಗಿದೆ. ಈ ಹಿನ್ನೆಲೆ 5ನೇ ತಲೆಮಾರಿನ ಯುದ್ಧ ವಿಮಾನ ಭಾರತಕ್ಕೆ ಅವಶ್ಯಕ ಎನ್ನಲಾಗಿದೆ. ಪ್ರಮುಖವಾಗಿ ಭಾರತದ ವಾಯುಪಡೆಯ ಸ್ಕ್ವಾಡ್ರನ್ ಸಾಮರ್ಥ್ಯ ಕ್ಷೀಣಿಸುತ್ತಿದ್ದು, ಭಾರತೀಯ ವಾಯುಪಡೆ 42 ಸ್ಕ್ವಾಡ್ರನ್‌ಗಳನ್ನು ನಿರ್ವಹಿಸಲು ಅಧಿಕಾರ ಹೊಂದಿದ್ದು, ಪ್ರಸ್ತುತ 31 ಸ್ಕ್ವಾಡ್ರನ್‌ಗಳನ್ನು ಮಾತ್ರ ಹೊಂದಿದೆ.

ಭಾರತ ಅತ್ತ ಪಾಕ್ ಮತ್ತು ಇತ್ತ ಚೀನಾ ದೇಶಗಳಿಂದ ಅಪಾಯ ಎದುರಿಸುತ್ತಿದ್ದು ಪಾಕಿಸ್ತಾನಕ್ಕೆ ಚೀನಾ ತನ್ನ 5ನೇ ತಲೆಮಾರಿನ ಯುದ್ಧವಿಮಾನಗಳನ್ನು ನೀಡಲು ಮುಂದಾಗುತ್ತಿದೆ. ಅಲ್ಲದೆ ತಾನೂ ಕೂಡ 6ನೇ ತಲೆಮಾರಿನ ಯುದ್ಧ ವಿಮಾನವನ್ನು ಪರೀಕ್ಷೆಗೊಳಪಡಿಸುತ್ತಿದೆ. ಇಂತಹ ಸಂದಿಗ್ಧ ಪರಿಸ್ಥಿತಿಯಲ್ಲಿ ಭಾರತ ತನ್ನ ವಾಯುಪಡೆ ಬಲಗೊಳಿಸಲೇಬೇಕಾದ ಅನಿವಾರ್ಯತೆಯಲ್ಲಿದೆ.

ಭಾರತ ಮತ್ತು ರಷ್ಯಾ ಈ ಹಿಂದೆ ಐದನೇ ತಲೆಮಾರಿನ ಯುದ್ಧ ವಿಮಾನ ಕಾರ್ಯಕ್ರಮದ ಒಪ್ಪಂದ ಮಾಡಿಕೊಂಡಿದ್ದವು. ಆದರೆ, ವೆಚ್ಚ, ತಂತ್ರಜ್ಞಾನ ವರ್ಗಾವಣೆ ಮತ್ತು ಕಾರ್ಯಕ್ಷಮತೆಯ ಆತಂಕದ ಕುರಿತು ಭಿನ್ನಾಭಿಪ್ರಾಯಗಳಿಂದ ಈ ಯೋಜನೆಯನ್ನು 2018ರಲ್ಲಿ ಸ್ಥಗಿತಗೊಳಿಸಲಾಯಿತು. ರಷ್ಯಾ ಈ ಕಳವಳಗಳನ್ನು ಪರಿಹರಿಸಿದರೆ, ಭಾರತವು ಖಗ–57 ಉತ್ಪಾದನೆಗೆ ಪಾಲುದಾರಿಕೆಯನ್ನು ಮರುಪರಿಶೀಲಿಸಬಹುದು ಎಂದು ತಜ್ಞರು ಹೇಳಿದ್ದಾರೆ.



# ಪೌಜಿಯಾ ಬೇಗಂ ಮುಖ್ಯ ಗುರುಗಳಾಗಿ ಉತ್ತಮ ಸೇವೆ ಸಲ್ಲಿಸಿದ್ದಾರೆ: ಚಂದ್ರಶೇಖರ್.ಡಿ.



**ಮಾನ್ವಿ,** ತಾಲೂಕಿನ ಹಿರೇಕೋಟ್ನೆಕಲ್ ಗ್ರಾಮದಲ್ಲಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಯೋ ನಿವೃತ್ತಿ ಹೊಂದಿದ ಶಾಲೆಯ ಮುಖ್ಯಗುರು ಪೌಜಿಯಾ ಬೇಗಂ ರವರನ್ನು ತಾ.ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ.ಡಿ ಸನ್ಮಾನಿಸಿ ಗೌರವಿಸಿ ಮಾತನಾಡಿ ತಾಲೂಕಿನ ವಿವಿಧ ಶಾಲೆಗಳಲ್ಲಿ ಪೌಜಿಯಾ ಬೇಗಂ ರವರು ಶಿಕ್ಷಕರಾಗಿ , ಮುಖ್ಯ ಗುರುಗಳಾಗಿ ಉತ್ತಮ ಸೇವೆ ಸಲ್ಲಿಸಿ ಶಾಲಾ ಮಕ್ಕಳಿಗೆ ಉತ್ತಮ ಶಿಕ್ಷಣವನ್ನು ನೀಡುವುದಕ್ಕೆ ಶ್ರಮಿಸಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕ.ರಾ.ಪ್ರಾ.ಶಾ.ಶಿಕ್ಷಕರ ಸಂಘದ ತಾ.ಅಧ್ಯಕ್ಷರಾದ ಸಂಗಮೇಶ ಮುಧೋಳ್, ಮೂಕಪ್ಪ ಕಟ್ಟಿಮನಿ, ಬಿ.ಆರ್.ಸಿ.ಮಹೇಶ, ಮಹಮ್ಮದ್ ಯೂನೂಸ್ ಸೇರಿದಂತೆ ಇನ್ನಿತರರು ಇದ್ದರು.

# ಹುಬ್ಬಳ್ಳಿ – ತುಳಜಾಪುರ ನಡುವೆ ರಾಜಹಂಸ ಬಸ್ ವ್ಯವಸ್ಥೆ




**ಹುಬ್ಬಳ್ಳಿ,ಜೂ.02–** ಧಾರವಾಡ ಜಿಲ್ಲೆಯಿಂದ ಮಹಾರಾಷ್ಟ್ರದ ಸೊಲ್ಲಾಪುರ ಹಾಗೂ ತುಳಜಾಪುರಕ್ಕೆ ಹೋಗಿ ಬರುವ ಭಕ್ತಾದಿಗಳು, ವಾಣಿಜ್ಯೋದ್ಯಮಿಗಳು ಹಾಗೂ ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯು ರಾಜಹಂಸ ಬಸ್ ಸಂಚಾರವನ್ನು ಆರಂಭಿಸಿದೆ.

ಹಿರಿಯ ಅಧಿಕಾರಿಗಳು ನೂತನ ಬಸ್ ಮಾರ್ಗಕ್ಕೆ ಚಾಲನೆ ನೀಡಿದರು. ನಂತರ ವಿಭಾಗೀಯ ನಿಯಂತ್ರಣಾಧಿಕಾರಿ ಹೆಚ್. ರಾಮನಗೌಡರ್ ಅವರು ಮಾತನಾಡಿ, 'ಧಾರವಾಡ ಜಿಲ್ಲೆಯಿಂದ ತುಳಜಾಪುರ ಅಂಬಾ ಭವಾನಿ ದೇವಿಯ ದರ್ಶನಕ್ಕೆ ತೆರಳುವ ಭಕ್ತಾಧಿಗಳು, ವಾಣಿಜ್ಯೋದ್ಯಮಿಗಳು ಹಾಗೂ ಮತ್ತಿತರ ಕೆಲಸ ಕಾರ್ಯಗಳಿಗೆ ಸೊಲ್ಲಾಪುರ ಮತ್ತಿತರ ಸ್ಥಳಗಳಿಗೆ ಹೋಗುವ ಇತರ ಪ್ರಯಾಣಿಕರಿಗೆ ಮತ್ತಷ್ಟು ಆರಾಮದಾಯಕ ಸಾರಿಗೆ ವ್ಯವಸ್ಥೆ ಕಲ್ಪಿಸುವ ನಿಟ್ಟಿನಲ್ಲಿ ನವಲಗುಂದ, ನರಗುಂದ, ಗದ್ದನಕೇರಿ ಕ್ರಾಸ್, ವಿಜಯಪುರ, ಸೋಲಾಪುರ ಮಾರ್ಗವಾಗಿ ಹುಬ್ಬಳ್ಳಿಯಿಂದ ತುಳಜಾಪುರಕ್ಕೆ ನೇರವಾಗಿ ರಾಜಹಂಸ ರಾತ್ರಿ ಸಾರಿಗೆ ಬಸ್ ಸಂಚಾರ ಪ್ರಾರಂಭಿಸಲಾಗಿದೆ' ಎಂದು ತಿಳಿಸಿದರು.

ವೇಳಾಪಟ್ಟಿ : ಹುಬ್ಬಳ್ಳಿ ಗೋಕುಲ ಬಸ್ ನಿಲ್ದಾಣದಿಂದ ರಾತ್ರಿ 10–15ಕ್ಕೆ ಬಸ್ ಹೊರಡುತ್ತದೆ. ಹೊಸೂರು ಬಸ್ ನಿಲ್ದಾಣದಿಂದ ರಾತ್ರಿ 10–30ಕ್ಕೆ ಹೊರಡುತ್ತದೆ. ನವಲಗುಂದ(11–15), ನರಗುಂದ(11–45), ಗದ್ದನಕೇರಿ ಕ್ರಾಸ್ (ರಾತ್ರಿ1–15), ವಿಜಯಪುರ(ಬೆಳಗ್ಗೆ 2–45), ಸೊಲ್ಲಾಪುರ ಬೆಳಗ್ಗೆ 5–15ಕ್ಕೆ ಹೊರಟು ತುಳಜಾಪುರಕ್ಕೆ ಮರುದಿನ ಬೆಳಗ್ಗೆ 6–15ಕ್ಕೆ ತಲುಪುತ್ತದೆ.

ತುಳಜಾಪುರದಿಂದ ರಾತ್ರಿ 8–15 ಕ್ಕೆ ಬಸ್? ಹೊರಡುತ್ತದೆ. ಸೊಲ್ಲಾಪುರದಿಂದ ರಾತ್ರಿ 10–00ಕ್ಕೆ ಹೊರಟು ವಿಜಯಪುರ ಮಾರ್ಗವಾಗಿ ಹುಬ್ಬಳ್ಳಿಗೆ ಮರುದಿನ ಬೆಳಗ್ಗೆ 5–00ಕ್ಕೆ ಆಗಮಿಸುತ್ತದೆ.

ಪ್ರಯಾಣ ದರ : ಅಪಘಾತ ಪರಿಹಾರ ಶುಲ್ಕ ಹಾಗೂ ಟೋಲ್ ಫೀ ಸೇರಿ ಹುಬ್ಬಳ್ಳಿಯಿಂದ ಸೊಲ್ಲಾಪುರಕ್ಕೆ ರೂ.568 ಹಾಗೂ ತುಳಜಾಪುರಕ್ಕೆ ರೂ. 678 ಪ್ರಯಾಣ ದರ ನಿಗದಿಪಡಿಸಲಾಗಿದೆ.

ಮುಂಗಡ ಬುಕಿಂಗ್‌ಗೆ ರಿಯಾಯಿತಿ : ಈ ಬಸ್ಸಿಗೆ ಮುಂಗಡ ಬುಕ್ಕಿಂಗ್ ಮಾಡಲು ತಿತಿತಿ.ಇಡಿಣಛಿ.ಟಿ ವೆಬ್ ಸೈಟ್, ಏಖಖಖಿಅ ಒಠಟಿಜ ಂಠಿ ಹಾಗೂ ಪ್ರಮುಖ ಬಸ್ ನಿಲ್ದಾಣಗಳಲ್ಲಿ ಅವಕಾಶ ಕಲ್ಪಿಸಲಾಗಿದೆ. ಒಂದೇ ಟಿಕೆಟ್?ನಲ್ಲಿ 4 ಅಥವಾ ಹೆಚ್ಚು ಆಸನಗಳನ್ನು ಕಾಯ್ದಿರಿಸಿದರೆ ಪ್ರಯಾಣ ದರದಲ್ಲಿ ಶೇಕಡ 5ರಷ್ಟು ರಿಯಾಯಿತಿ ನೀಡಲಾಗುತ್ತದೆ. ಹೋಗುವ ಮತ್ತು ಹಿಂದಿರುಗುವ ಪ್ರಯಾಣಕ್ಕೆ ಒಂದೇ ಟಿಕೆಟ್ ಪಡೆದರೆ ಹಿಂದಿರುಗುವ ಪ್ರಯಾಣದರದಲ್ಲಿ ಶೇಕಡ 10 ರಷ್ಟು ರಿಯಾಯಿತಿ ನೀಡಲಾಗುತ್ತದೆ ಎಂದು ಅವರು ಮಾಹಿತಿ ನೀಡಿದ್ದಾರೆ.

ವಿಭಾಗೀಯ ಸಂಚಾರ ಅಧಿಕಾರಿ ಸಂಗಪ್ಪ ಮಾಟೊಳಿ, ವಿಭಾಗೀಯ ತಾಂತ್ರಿಕ ಇಂಜಿನಿಯರ್ ದೀಪಕ್? ಜಾಧವ್, ಡಿಪೋ ಮ್ಯಾನೇಜರ್ ವಿನೋದ ಅಮ್ಮಣಗಿ ಮತ್ತಿತರರು ಇದ್ದರು.

# ಮೂಳೆ ಆರೋಗ್ಯಕ್ಕಾಗಿ ಆಹಾರ



ಮೂಳೆಗಳು ನಮ್ಮ ದೇಹದ ಆಧಾರಸ್ತಂಭಗಳು. ದೇಹಕ್ಕೆ ಅಗತ್ಯ ಬೆಂಬಲ ನೀಡುವುದರ ಜೊತೆಗೆ ಮೂಳೆಗಳು ನಮ್ಮ ಪ್ರತಿಯೊಂದು ಚಲನೆಯ ಹಿಂದಿನ ಅಡಿಪಾಯವಾಗಿವೆ. ನಾವು ಮೆಟ್ಟಿಲುಗಳನ್ನು ಹತ್ತುತ್ತಿರಲಿ, ಯಾವುದೇ ವಸ್ತುಗಳನ್ನು ಎತ್ತುತ್ತಿರಲಿ ಅಥವಾ ಸರಳವಾಗಿ ನಿಂತಿರಲಿ ಮೂಳೆಗಳ ಹಂದರವಾದ ಅಸ್ಥಿಪಂಜರ ಸದಾ ಕೆಲಸ ಮಾಡುತ್ತಿರುತ್ತದೆ. ಆದ್ದರಿಂದ ಮೂಳೆಗಳ ಆರೋಗ್ಯವನ್ನು ಚೆನ್ನಾಗಿ ಕಾಪಾಡಿಕೊಳ್ಳುವುದು ನಮ್ಮ ಮೊದಲ ಆದ್ಯತೆಯಾಗಬೇಕು. ನಡಿಗೆ ಮತ್ತು ವ್ಯಾಯಾಮಗಳ ಜೊತೆಗೆ ನಾವು ದಿನನಿತ್ಯ ಸೇವಿಸುವ ಆಹಾರದ ಮೂಲಕ ಮೂಳೆಗಳ ಆರೋಗ್ಯದ ಬಗೆಗೆ ಕಾಳಜಿ ವಹಿಸುವುದು ಬಹಳ ಮುಖ್ಯವಾಗಿದೆ.

ಮೂಳೆಗಳ ಆರೋಗ್ಯವು ಈಗ ಅನೇಕರು ತಿಳಿದಿರುವಂತೆ ಕೇವಲ ಕ್ಯಾಲ್ಸಿಯಂ ಮಾತ್ರೆಗಳು ಮತ್ತು ಹಾಲು ಕುಡಿಯುವುದರ ಮೂಲಕ ದೊರೆಯುವುದಿಲ್ಲ. ಅನೇಕ ದೈನಂದಿನ ಖಾದ್ಯ ಪದಾರ್ಥಗಳು ಮೂಳೆಗಳನ್ನು ಬಲವಾಗಿ, ಪರಿಸ್ಥಿತಿಗೆ ತಕ್ಕಂತೆ ಹೊಂದಿಕೊಳ್ಳುವ ಮತ್ತು ಬಳಕೆಗೆ ಸದಾ ಸಿದ್ಧವಾಗಿಡಲು ಸಹಾಯ ಮಾಡುತ್ತವೆ. ಮೂಳೆಗಳ ಆರೋಗ್ಯಕ್ಕೆ ಬೇಕಾದ ಪೋಷಕಾಂಷಗಳಿರುವ ಆಹಾರ ಸುಲಭವಾಗಿ ದೊರಕುತ್ತದೆ ಮತ್ತು ಸೇವಿಸಲು ರುಚಿಕರವಾಗಿಯೂ ಇರುತ್ತದೆ.

**ಹಸಿರು ಸೊಪ್ಪುಗಳು:**

ಗಾಢ ಹಸಿರು ಸೊಪ್ಪುಗಳು ಕೇವಲ ಉತ್ತಮ ಚರ್ಮ ಹೊಂದಲು ಅಥವಾ ಜೀರ್ಣಕ್ರಿಯೆಗೆ ಸಹಾಯ ಮಾಡುವುದರ ಜೊತೆಗೆ ಮೂಳೆಗಳನ್ನು ಬಲವಾಗಿಡಲು ಸಹಾಯ ಮಾಡುವ ಪೋಷಕಾಂಶಗಳಿಂದ ಕೂಡಿದೆ.

ಎಲೆಕೋಸು, ಪುದೀನಾ, ಕರಿಬೇವು, ಕೊತ್ತಂಬರಿ ಸೊಪ್ಪು, ಪಾಲಕ್, ದಂಟು, ನುಗ್ಗೆ, ಮೆಂತ್ಯ ಸೊಪ್ಪು ಮತ್ತು ಬೊಕ್ ಚಾಯ್‌ನಂತಹ (ಚೀನೀ ಎಲೆಕೋಸು) ಹಸಿರೆಲೆಗಳು ಕ್ಯಾಲ್ಸಿಯಂ, ವಿಟಮಿನ್ ಕೆ ಮತ್ತು ಮೆಗ್ನೀಸಿಯಮ್ ಪೋಷಕಾಂಶಗಳಿಂದ ಸಮೃದ್ಧವಾಗಿವೆ. ಇವು ಮೂಳೆಗಳ ಸಾಂದ್ರತೆಯನ್ನು ಬೆಂಬಲಿಸುತ್ತವೆ ಮತ್ತು ಅವುಗಳನ್ನು ದೃಢವಾಗಿಡುವ ಖನಿಜಗಳನ್ನು ದೇಹವು ಹಿಡಿದಿಡಲು ಸಹಾಯ ಮಾಡುತ್ತವೆ. ಈ ಸೊಪ್ಪುಗಳನ್ನು ಬೇಯಿಸಿ/ಹಸಿಯಾಗಿ ಆಹಾರದಲ್ಲಿ ಸೇರಿಸಿ, ಸ್ಮೂಥಿಗಳಲ್ಲಿ ಮಿಶ್ರಣ ಮಾಡಿ ಅಥವಾ ಬೆಳ್ಳುಳ್ಳಿಯೊಂದಿಗೆ ಹುರಿದು ತರಕಾರಿಗಳೊಂದಿಗೆ ಸೇರಿಸಿ ಪಲ್ಯ ಅಥವಾ ಸಾಂಬಾರ್ ಮಾಡಿ ಸವಿಯಿರಿ.

ಬಾದಾಮಿ, ಎಳ್ಳು, ಸೂರ್ಯಕಾಂತಿ

ಪುಷ್ಟಿಕರ ಬಾದಾಮಿ, ಎಳ್ಳು, ಸೂರ್ಯಕಾಂತಿ ಮತ್ತು ಅಗಸೆಬೀಜಗಳು ಕ್ಯಾಲ್ಸಿಯಂ, ಆರೋಗ್ಯಕರ ಕೊಬ್ಬು ಮತ್ತು ಮೂಳೆಗಳಿಗೆ ಬಲವನ್ನು ನೀಡುತ್ತವೆ ಮತ್ತು ಉರಿಯೂತವನ್ನು ಕಡಿಮೆ ಮಾಡಲು ಒಟ್ಟಿಗೆ ಕೆಲಸ ಮಾಡುವ ಖನಿಜಗಳನ್ನು ಹೊಂದಿರುತ್ತವೆ. ಅವು ಖಾದ್ಯಗಳಾಗಿ ಪರಿಪೂರ್ಣವಾಗಿವೆ. ಹೆಚ್ಚಿನ ರುಚಿಗಾಗಿ ಆಹಾರದ ಜೊತೆಗೆ (ಉದಾಹರಣೆಗೆ ಪಾಯಸ) ಇವುಗಳನ್ನು ಸಾಮಾನ್ಯವಾಗಿ ಸೇರಿಸಲಾಗುತ್ತದೆ. ವಾಲ್ನಟ್ಸ್ (ಅಕ್ರೋಟ್) ಮತ್ತು ಅಗಸೆಬೀಜಗಳು ಒಮೆಗಾ–3 ಕೊಬ್ಬಿನಾಮ್ಲಗಳನ್ನು ಹೊಂದಿರುತ್ತವೆ, ಅವು ಉರಿಯೂತ ವಿರೋಧಿ ಗುಣಲಕ್ಷಣಗಳನ್ನು ಹೊಂದಿವೆ. ದೀರ್ಘಕಾಲದ ಉರಿಯೂತವು ಮೂಳೆಗಳನ್ನು ದುರ್ಬಲಗೊಳಿಸುತ್ತದೆ. ಒಮೆಗಾ–3 ಕೊಬ್ಬಿನಾಮ್ಲಗಳು ಮೂಳೆಗಳನ್ನು ರಕ್ಷಿಸಲು ಸಹಾಯ ಮಾಡುತ್ತವೆ.

**ಮೊಸರು, ಚೀಸ್ ಮತ್ತು ಹಾಲು:**

ಮೊಸರು, ಚೀಸ್ ಮತ್ತು ಹಾಲು ಮೂಳೆಗಳ ಆರೋಗ್ಯಕ್ಕೆ ಸಹಾಯಕವಾದ ಕ್ಯಾಲ್ಸಿಯಂನ ಜನಪ್ರಿಯ ಮೂಲಗಳಾಗಿವೆ. ಆದರೆ ಇತ್ತೀಚೆಗೆ ಕೆಲವರು ಹಾಲು ಮತ್ತು ಅದರ ಪದಾರ್ಥಗಳನ್ನು ಸೇರಿಸುವುದಿಲ್ಲ. ಸಸ್ಯ ಆಧಾರಿತ ಮೊಸರಿನ ಜೊತೆಗೆ ಬಾದಾಮಿ, ಸೋಯಾ ಅಥವಾ ಓಟ್ ಹಾಲು ಅಗತ್ಯವಾದ ಪೋಷಕಾಂಶಗಳನ್ನು ಒದಗಿಸುತ್ತವೆ. ಇವುಗಳನ್ನು ಸ್ಮೂಥಿಗಳು, ಉಪಾಹಾರ ಅಥವಾ ಖಾರದ ಭಕ್ಷ್ಯಗಳಿಗೆ ಸೇರಿಸಿ ಸೇವಿಸಬಹುದು.

ಸಸ್ಯಾಹಾರಗಳು ಪ್ರೋಟೀನ್ ನ ಉತ್ತಮ ಮೂಲಗಳಷ್ಟೇ ಅಲ್ಲ – ಕ್ಯಾಲ್ಸಿಯಂ, ರಂಜಕ ಮತ್ತು ಮೆಗ್ನೀಷಿಯಮ್ಗಳನ್ನು ಹೊಂದಿವೆ. ಕ್ಯಾಲ್ಸಿಯಂಯುಕ್ತ ಟೋಫು ಮೂಳೆಗಳಿಗೆ ವಿಶೇಷವಾಗಿ ಸಹಾಯಕವಾಗಿದೆ. ಬೀನ್ಸ್‌ಗಳನ್ನು ಸೂಪ್, ಪಲ್ಯ ಮತ್ತು ಸಲಾಡುಗಳಿಗೆ ಸೇರಿಸುವುದು ಸುಲಭ.

ಸಾಲ್ಮನ್ ಮತ್ತು ಸಾರ್ಡೀನ್ ಮೀನುಗಳು

ಸಾಲ್ಮನ್ ಮತ್ತು ಸಾರ್ಡೀನುಗಳಂತಹ ಎಣ್ಣೆಯುಕ್ತ ಮೀನುಗಳು ವಿಟಮಿನ್ ಡಿ ಮತ್ತು ಒಮೆಗಾ–3 ಕೊಬ್ಬುಗಳಿಂದ ತುಂಬಿವೆ. ಇದು ದೇಹವು ಕ್ಯಾಲ್ಸಿಯಂಅನ್ನು ಹೀರಿಕೊಳ್ಳಲು ಮತ್ತು ಉರಿಯೂತವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಇವುಗಳನ್ನು ನಿಯಮಿತವಾಗಿ ಸೇವಿಸುವುದು ಮೂಳೆಗಳಿಗೆ ಬಲವನ್ನು ನೀಡುತ್ತದೆ. ಜೊತೆಗೆ ಕೀಲುಗಳು ಮತ್ತು ಸ್ನಾಯುಗಳನ್ನು ಉತ್ತಮ ಸ್ಥಿತಿಯಲ್ಲಿರಿಸುತ್ತವೆ.

**ಧಾನ್ಯಗಳು:**

ಮೂಳೆಯ ಆರೋಗ್ಯವನ್ನು ಕಾಪಾಡಿಕೊಳ್ಳಲು ಇಡೀ ಧಾನ್ಯಗಳು ಬಹಳ ಮುಖ್ಯ. ಈ ಧಾನ್ಯಗಳು ಮೆಗ್ನೀಸಿಯಮ್, ರಂಜಕ ಮತ್ತು ಬಿ ಜೀವಸತ್ವಗಳಂತಹ ಅಗತ್ಯ ಪೋಷಕಾಂಶಗಳಿಂದ ಸಮೃದ್ಧವಾಗಿವೆ, ಇವೆಲ್ಲವೂ ಮೂಳೆಯ ಬಲ ಮತ್ತು ಬೆಳವಣಿಗೆಗೆ ಬಹು ಮುಖ್ಯವಾಗಿವೆ. ಮೂಳೆ ಸಾಂದ್ರತೆಗೆ ಪ್ರಮುಖ ಖನಿಜವಾದ ಕ್ಯಾಲ್ಸಿಯಂ ಹೀರಿಕೊಳ್ಳುವಿಕೆಯಲ್ಲಿ ಮೆಗ್ನೀಸಿಯಮ್ ಸಹಾಯ ಮಾಡುತ್ತದೆ. ಧಾನ್ಯಗಳು ನಾರನ್ನು ಸಹ ಹೊಂದಿರುತ್ತವೆ, ಇದು ಕರುಳಿನ ಆರೋಗ್ಯವನ್ನು ಬೆಂಬಲಿಸುತ್ತವೆ. ಇವುಗಳು ಹಾಲಿನ ಉತ್ಪನ್ನಗಳಂತೆ ಕ್ಯಾಲ್ಸಿಯಂಭರಿತವಾಗಿಲ್ಲದಿದ್ದರೂ ಸಮತೋಲಿತ ಆಹಾರಕ್ಕೆ ಪೂರಕವಾಗಿವೆ.

**ಗೋಧಿ, ಸಿರಿಧಾನ್ಯ ಮತ್ತು ರಾಗಿ:**

ಗೋಧಿ, ಸಿರಿಧಾನ್ಯಗಳು ಮತ್ತು ರಾಗಿ ನಮ್ಮ ದೇಹದ ಒಟ್ಟಾರೆ ಪೋಷಣೆಯನ್ನು ಹೆಚ್ಚಿಸುತ್ತವೆ. ಜೊತೆಗೆ ಕಂದು ಅಕ್ಕಿ, ಓಟ್ಸ್ ಮತ್ತು ಕ್ವಿನೋವಾದಂತಹ ಧಾನ್ಯಗಳು ಮೆಗ್ನೀಸಿಯಮ್ಮಿನಂತಹ ಖನಿಜಗಳಿಂದ ತುಂಬಿರುತ್ತವೆ. ಇದು ದೇಹವು ಕ್ಯಾಲ್ಸಿಯಮ್ಮನ್ನು ಉತ್ತಮವಾಗಿ ಹೀರಿಕೊಳ್ಳಲು ಸಹಾಯ ಮಾಡುತ್ತದೆ. ಈ ಧಾನ್ಯಗಳನ್ನು ತಪ್ಪದೇ ದೈನಂದಿನ ಊಟಕ್ಕೆ ಸೇರಿಸಿಕೊಳ್ಳಬೇಕು.

ಕೊನೆಮಾತು: ಕೊನೆಯದಾಗಿ ಹೇಳುವುದಾದರೆ ಮೂಳೆಗಳ ಆರೋಗ್ಯವನ್ನು ಕಾಪಾಡಿಕೊಳ್ಳಲು ಆಹಾರ ಬಹಳ ಸಹಾಯ ಮಾಡುತ್ತದೆ. ಕ್ಯಾಲ್ಸಿಯಂ, ವಿಟಮಿನ್ ಡಿ, ಮೆಗ್ನೀಷಿಯಮ್ ಮುಂತಾದ ಪೋಷಕಾಂಶಗಳಿರುವ ಸಮತೋಲನ ಆಹಾರ ಸೇವನೆ ಮೂಳೆಗಳನ್ನು ಬಲಪಡಿಸಲು ಅಗತ್ಯ. ಪೋಷಕಾಂಶಭರಿತ ಆಹಾರ ಸೇವನೆ ಮತ್ತು ಆರೋಗ್ಯಕರ ಜೀವನಶೈಲಿ ಅಳವಡಿಸಿಕೊಳ್ಳುವುದರಿಂದ ಮೂಳೆಗಳ ಆರೋಗ್ಯವನ್ನು ದೀರ್ಘಕಾಲ ಚೆನ್ನಾಗಿ ಕಾಪಾಡಿಕೊಳ್ಳಬಹುದು.

**ಡಾ. ವಸುಂಧರಾ ಭೂಪತಿ**

# ದೇಶಕ್ಕೆ ಸತ್ಯ ಬಹಿರಂಗಪಡಿಸಿ: ಭಾರತೀಯ ಜೆಟ್‌ಗಳು ಧ್ವಂಸ ಎಂದು CDS ಒಪ್ಪಿಕೊಂಡ ನಂತರ ಕಾಂಗ್ರೆಸ್



**ನವದೆಹಲಿ,ಜೂ.02–** ಪಾಕಿಸ್ತಾನದೊಂದಿಗಿನ ನಾಲ್ಕು ದಿನಗಳ ಸೇನಾ ಸಂಘರ್ಷದಲ್ಲಿ ಭಾರತ ಎಷ್ಟು ಜೆಟ್ ಗಳನ್ನು ಕಳೆದುಕೊಂಡಿದೆ ಎಂಬ ಬಗ್ಗೆ ಸತ್ಯವನ್ನು ಬಹಿರಂಗಪಡಿಸಬೇಕು ಎಂದು ಕಾಂಗ್ರೆಸ್ ಶನಿವಾರ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದೆ.

ಆಪರೇಷನ್ ಸಿಂಧೂರನಲ್ಲಿ ಭಾರತೀಯ ವಾಯುಪಡೆಯ ವಿಮಾನಗಳು ಧ್ವಂಸಗೊಂಡಿವೆ ಎಂದು ರಕ್ಷಣಾ ಪಡೆಗಳ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್ ಒಪ್ಪಿಕೊಂಡ ನಂತರ ಕಾಂಗ್ರೆಸ್ ಮೋದಿ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದೆ.

ಆದಾಗ್ಯೂ, ಜನರಲ್ ಚೌಹಾಣ್ ಅವರು ಆರು ಭಾರತೀಯ ಜೆಟ್‌ಗಳನ್ನು ಹೊಡೆದುರುಳಿಸಿದ ಪಾಕಿಸ್ತಾನದ ಹೇಳಿಕೆಯನ್ನು "ಸಂಪೂರ್ಣವಾಗಿ ತಪ್ಪು" ಎಂದು ತಳ್ಳಿಹಾಕಿದ್ದಾರೆ.

ಸಿಡಿಎಸ್ ಹೇಳಿಕೆಗೆ ಪ್ರತಿಕ್ರಿಯಿಸಿದ ಕಾಂಗ್ರೆಸ್ ನಾಯಕ ಉತ್ತಮ್ ಕುಮಾರ್ ರೆಡ್ಡಿ, ಸಂಘರ್ಷದ ಸಮಯದಲ್ಲಿ, ವಿಶೇಷವಾಗಿ ಸಿಡಿಎಸ್ "ಪ್ರವೇಶ"ದ ನಂತರ ಭಾರತದ ಎಷ್ಟು ವಿಮಾನಗಳನ್ನು ಹೊಡೆದುರುಳಿಸಲಾಗಿದೆ ಎಂದು ದೇಶವು ತಿಳಿದುಕೊಳ್ಳಲು ಬಯಸಿದೆ ಎಂದಿದ್ದಾರೆ.

"ಒಂದು ಸರ್ಕಾರ ಪಾರದರ್ಶಕವಾಗಿರಬೇಕು. ಪ್ರಜಾಪ್ರಭುತ್ವದಲ್ಲಿ ಹೊಣೆಗಾರಿಕೆ ಸಾಮಾನ್ಯ. ಇದು ದೇಶಭಕ್ತಿಯ ಬಗ್ಗೆ ಅಲ್ಲ. ನಾವು ಅವರಿಗಿಂತ ಹೆಚ್ಚು ದೇಶಭಕ್ತರು. ಗಾಂಧಿ ಕುಟುಂಬ, ಸ್ವತಃ ದೇಶದ ಸಮಗ್ರತೆಗಾಗಿ ಭಾರಿ ತ್ಯಾಗಗಳನ್ನು ಮಾಡಿದೆ. ಆದರೂ ಈ ಜನ ನಮ್ಮನ್ನು ಪ್ರಶ್ನಿಸುತ್ತಾರೆ. ಇದು ನಿಜವಾಗಿಯೂ ಆಘಾತಕಾರಿ, ವಿಚಿತ್ರ" ಎಂದು ಕಾಂಗ್ರೆಸ್ ಮುಖಂಡ ಹೇಳಿದ್ದಾರೆ.

ಪ್ರತಿಯೊಂದು ಪ್ರಯತ್ನದಲ್ಲೂ ಕಾಂಗ್ರೆಸ್ ಭಾರತೀಯ ಸಶಸ್ತ್ರ ಪಡೆಗಳನ್ನು ಬೆಂಬಲಿಸುತ್ತದೆ ಎಂದು ಅವರು ಪುನರುಚ್ಚರಿಸಿದರು.

# 50 ವರ್ಷಗಳಲ್ಲಿ ಸುಖೋಯ್ ನಿಂದ ಬೋಯಿಂಗ್ ವರೆಗೆ: ಜಗನ್ನಾಥ ದೇವರ ರಥಕ್ಕೆ ಹೊಸ ಟೈರ್‌ಗಳ ಅನ್ವೇಷಣೆ ಬಗ್ಗೆ ಇಲ್ಲಿದೆ ವಿಶೇಷ ಮಾಹಿತಿ

**ಕೋಲ್ಕತ್ತಾ,ಜೂ.02–** ಜಗನ್ನಾಥನ ರಥ ಜೂನ್ 27 ರಂದು ರಥಯಾತ್ರೆಗಾಗಿ ಕೋಲ್ಕತ್ತಾ ಬೀದಿಗಳಲ್ಲಿ ಸಾಗಲಿದೆ. 20 ವರ್ಷಗಳ ಹುಡುಕಾಟದ ನಂತರ, ರಥಯಾತ್ರೆಯ ಸಂಘಟಕರಾದ ಇಸ್ಕಾನ್ ಕೋಲ್ಕತ್ತಾ, ಬೃಹತ್ ರಥಕ್ಕಾಗಿ ಹೊಸ ಟೈರ್‌ಗಳನ್ನು ಕಂಡುಹಿಡಿದಿದೆ. ಬೋಯಿಂಗ್ 747 ಜಂಬೋ ಜೆಟ್‌ನಿಂದ ಪಡೆದ ಹಳೆಯ ಟೈರ್‌ಗಳನ್ನು ಸುಖೋಯ್ ಯುದ್ಧ ವಿಮಾನಗಳಲ್ಲಿ ಬಳಸುವ ಮತ್ತು ಒಖಈ ತಯಾರಿಸಿದ ಟೈರ್‌ಗಳಿಂದ ಬದಲಾಯಿಸಲಾಗಿದೆ.



ಇಸ್ಕಾನ್ ಕೋಲ್ಕತ್ತಾದ ಉಪಾಧ್ಯಕ್ಷ ಮತ್ತು ವಕ್ತಾರ ರಾಧಾರಾಮನ್ ದಾಸ್ ಈ ಬಗ್ಗೆ ಮಾತನಾಡಿದ್ದು, ಭಗವಂತನ ರಥಕ್ಕೆ ಉತ್ತಮವಾದ ಫಿಟ್ ನ್ನು ಕಂಡುಕೊಂಡ ಆಕರ್ಷಕ ಕಥೆಯನ್ನು ಹಂಚಿಕೊಂಡಿದ್ದಾರೆ.

ಕೋಲ್ಕತ್ತಾದಲ್ಲಿ ರಥಯಾತ್ರೆಯು 1972 ರಲ್ಲಿ ನಗರದ ಬೀದಿಗಳಲ್ಲಿ ಮೂರು ದೇವತೆಗಳನ್ನು ಇರಿಸಲಾಗಿರುವ ಒಂದು ಸಣ್ಣ ರಥದೊಂದಿಗೆ ಪ್ರಾರಂಭವಾಯಿತು. ಐದು ವರ್ಷಗಳ ನಂತರ, ಇಸ್ಕಾನ್ ಸದಸ್ಯರೊಬ್ಬರು ಜಗನ್ನಾಥ ಮತ್ತು ಅವರ ಸಹೋದರರಾದ ಬಲಭದ್ರ ಮತ್ತು ದೇವಿಯ ಸುಭದ್ರಾ ಅವರಿಗೆ ಮೂರು ಹೊಸ ರಥಗಳನ್ನು ದಾನ ಮಾಡಿದರು. ಜಗನ್ನಾಥನ ರಥಕ್ಕೆ ಬೋಯಿಂಗ್ ಜೆಟ್‌ನಿಂದ ಬಳಸಿದ ಸೆಕೆಂಡ್ ಹ್ಯಾಂಡ್ ಟೈರ್‌ಗಳನ್ನು ಅಳವಡಿಸಲಾಗಿತ್ತು.

ವರ್ಷಗಳಲ್ಲಿ, ಟೈರ್‌ಗಳು ಸವೆದುಹೋಗುತ್ತಿದ್ದವು ಮತ್ತು ಪ್ರತಿ ರಥಯಾತ್ರೆಗೂ ಮೊದಲು ದುರಸ್ತಿ ಮಾಡಲಾಗುತ್ತಿತ್ತು. ಆದಾಗ್ಯೂ, 2005 ರಲ್ಲಿ, ದಾಸ್ ಅವುಗಳನ್ನು ಬದಲಾಯಿಸಬೇಕಾಗಿದೆ ಎಂದು ಗಮನಿಸಿದರು. ಇದು ಭಗವಂತನ ರಥಕ್ಕಾಗಿ ಹೊಸ ಟೈರ್‌ಗಳಿಗಾಗಿ ಅವರ 20 ವರ್ಷಗಳ ಹುಡುಕಾಟವನ್ನು ಪ್ರಾರಂಭಿಸಿತು.

ಟೈರ್‌ಗಳನ್ನು ಜೋಡಿಸುವಲ್ಲಿ ಒಂದು ಪ್ರಮುಖ ಸವಾಲೆಂದರೆ ಅವು ಹೊರಬೇಕಾದ ತೂಕವನ್ನು ನಿರ್ಣಯಿಸುವುದು. "ಬೃಹತ್ ರಥಕ್ಕಾಗಿ ತೂಕದ ಮಾಪಕವನ್ನು ಕಂಡುಹಿಡಿಯುವುದು ಒಂದು ದೊಡ್ಡ ಕೆಲಸವಾಗಿತ್ತು. ನಾವು ಅಂತಿಮವಾಗಿ ಅದನ್ನು ತೂಗುವಲ್ಲಿ ಯಶಸ್ವಿಯಾದೆವು ಮತ್ತು ಅದು ಸುಮಾರು ಒಂಬತ್ತು ಟನ್‌ಗಳಿಗೆ ತಲುಪಿತು. ಯಾತ್ರೆಯ ಸಮಯದಲ್ಲಿ ರಥದ ಮೇಲೆ ಭಕ್ತರ ತೂಕವನ್ನು ಗಣನೆಗೆ ತೆಗೆದುಕೊಂಡು, ಟೈರ್‌ಗಳು ಸುಮಾರು 16 ಟನ್‌ಗಳಷ್ಟು ತೂಕವನ್ನು ಹೊರಬೇಕಾಗುತ್ತದೆ ಎಂದು ನಾವು ಅರಿತುಕೊಂಡೆವು" ಎಂದು ದಾಸ್ ಹೇಳಿದ್ದಾರೆ.

"ನಾವು ಮೊದಲು ಡನ್‌ಲಪ್ ಜೊತೆ ಮಾತನಾಡಿದೆವು, ಆದರೆ ಅವರು ಈ ಟೈರ್‌ಗಳ ಉತ್ಪಾದನೆಯನ್ನು ನಿಲ್ಲಿಸಿದ್ದರು. ವ್ಯಾಪಕ ಸಂಶೋಧನೆಯ ನಂತರ, ಸುಖೋಯ್ ಟೈರ್‌ಗಳು ಅತ್ಯುತ್ತಮ ಹೊಂದಾಣಿಕೆ ಎಂದು ನಾವು ಕಂಡುಕೊಂಡೆವು. ನಾವು ಮೊದಲು 2018 ರಲ್ಲಿ ಒಖಈ ನ್ನು ಸಂಪರ್ಕಿಸಲು ಪ್ರಯತ್ನಿಸಿದೆವು, ಆದರೆ ಸಿಗಲಿಲ್ಲ. ಅಂತಿಮವಾಗಿ, ಅವರು ಆರು ವರ್ಷಗಳ ನಂತರ ಮತ್ತೆ ನಮ್ಮನ್ನು ಸಂಪರ್ಕಿಸಿದ್ದರು. ಡಿಸೆಂಬರ್ 2024 ರಲ್ಲಿ, ಅವರು ಒಂದು ತಂಡವನ್ನು ಕಳುಹಿಸಿದರು,

ನಾವು ಬೆಲೆಯನ್ನು ನಿರ್ಧರಿಸಿದ್ದೆವು, ಅವರು ಟೈರ್‌ಗಳನ್ನು ಒಂದು ತಿಂಗಳ ಹಿಂದೆಯೇ ತಲುಪಿಸಿದರು," ಎಂದು ದಾಸ್ ಎನ್ ಡಿಟಿವಿಗೆ ವಿವರಿಸಿದ್ದಾರೆ.

ಇಸ್ಕಾನ್ ಕೋಲ್ಕತ್ತಾ ಮೊದಲು ತಮ್ಮ ಅವಶ್ಯಕತೆಯನ್ನು ತಿಳಿಸಿದಾಗ ಒಖಈ ಅಧಿಕಾರಿಗಳು ಹೇಗೆ ಆಶ್ಚರ್ಯಚಕಿತರಾದರು. "ಈ ಟೈರ್‌ಗಳಿಗೆ ಇರುವ ಏಕೈಕ ಕ್ಲೈಂಟ್ ಭಾರತೀಯ ವಾಯುಪಡೆ ಎಂದು ನಮಗೆ ತಿಳಿಸಲಾಯಿತು" ಎಂದು ದಾಸ್ ನೆನಪಿಸಿಕೊಂಡಿದ್ದಾರೆ. ವಾಯುಪಡೆ ಟೈರ್‌ಗಳು ಸಾಕಷ್ಟು ತೂಕ ಹೊರುವ ಸಾಮರ್ಥ್ಯವನ್ನು ಹೊಂದಿವೆ ಎಂದು ಒಖಈ ಭರವಸೆ ನೀಡಿತು. ನಾಲ್ಕು ಟೈರ್‌ಗಳ ಒಟ್ಟು ಬೆಲೆ 1.80 ಲಕ್ಷ ರೂ. ಟೈರ್‌ಗಳನ್ನು ವಿತರಿಸಿ ಅಳವಡಿಸಿದ ನಂತರ, 24-ಕಿಮೀ ಡ್ರೈ ರನ್ ನ್ನು ಆಯೋಜಿಸಲಾಯಿತು ಮತ್ತು ಎಲ್ಲವೂ ಸರಿಯಾಗಿದೆ ಎಂದು ಕಂಡುಬಂದಿರುವುದಾಗಿ ದಾಸ್ ತಿಳಿಸಿದ್ದಾರೆ.

# ಆತ್ಮಹತ್ಯೆ ಮಾಡಿಕೊಳ್ಳಲು ಬೈಗುಳವನ್ನು ಪ್ರಚೋದನೆ ಎಂದು ಭಾವಿಸಲು ಆಗಲ್ಲ: ಸುಪ್ರೀಂ ಕೋರ್ಟ್

**ನವದೆಹಲಿ,ಜೂ.02–** ವಿದ್ಯಾರ್ಥಿ ಯೊಬ್ಬನನ್ನು ಗದರಿಸಿ ಆತ್ಮಹತ್ಯೆಗೆ ದೂಡಿದ ಆರೋಪ ಹೊತ್ತಿದ್ದ ವ್ಯಕ್ತಿಯೊಬ್ಬನನ್ನು ಸುಪ್ರೀಂ ಕೋರ್ಟ್ ಖುಲಾಸೆಗೊಳಿಸಿದ್ದು, ವಿದ್ಯಾರ್ಥಿಯ ಸಾವಿಗೆ ಆತನನ್ನು ಹೊಣೆಗಾರನನ್ನಾಗಿ ಮಾಡಲು ಸಾಕಷ್ಟು ಪುರಾವೆಗಳಿಲ್ಲ ಎಂದು ತೀರ್ಪು ನೀಡಿದೆ.



ಶಾಲೆ ಮತ್ತು ಹಾಸ್ಟೆಲ್‌ನ ಉಸ್ತುವಾರಿ ವಹಿಸಿದ್ದ ಆರೋಪಿಯು, ಮತ್ತೊಬ್ಬ ವಿದ್ಯಾರ್ಥಿ ನೀಡಿದ ದೂರಿನ ಮೇರೆಗೆ ಮೃತ ವಿದ್ಯಾರ್ಥಿ ಯನ್ನು ಬೈದಿದ್ದನು. ಈ ಘಟನೆಯ ನಂತರ ವಿದ್ಯಾರ್ಥಿ ತನ್ನ ಕೋಣೆಯಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದ.

ನ್ಯಾಯಮೂರ್ತಿಗಳಾದ ಅಹ್ಸಾನುದ್ದೀನ್ ಅಮಾನುಲ್ಲಾ ಮತ್ತು ಪ್ರಶಾಂತ್ ಕುಮಾರ್ ಮಿಶ್ರಾ ಅವರಿದ್ದ ಪೀಠವು, ಬೈಯುವುದರಿಂದ ಇಂತಹ ದುರಂತ ಸಂಭವಿಸುತ್ತದೆ ಎಂದು ಯಾವುದೇ ಸಾಮಾನ್ಯ ವ್ಯಕ್ತಿ ಊಹಿಸಲೂ ಸಾಧ್ಯವಿಲ್ಲ ಎಂದು ಹೇಳಿದೆ.

ಭಾರತೀಯ ದಂಡ ಸಂಹಿತೆಯ ಸೆಕ್ಷನ್ 306 ರ ಅಡಿ ಯಲ್ಲಿ ಆತ್ಮಹತ್ಯೆಗೆ ಪ್ರಚೋದನೆ ನೀಡಿದ ಅಪರಾಧಕ್ಕಾಗಿ ಶಿಕ್ಷಕನನ್ನು ಬಿಡುಗಡೆ ಮಾಡಲು ನಿರಾಕರಿಸಿದ ಮದ್ರಾಸ್ ಹೈಕೋರ್ಟ್‌ನ ಆದೇಶವನ್ನು ಸುಪ್ರೀಂ ಕೋರ್ಟ್ ರದ್ದುಗೊಳಿಸಿತು.

'ಈ ವಿಷಯವನ್ನು ಸಂಪೂರ್ಣವಾಗಿ ಪರಿಗಣಿಸಿದ ನಂತರ, ಇದು ಹಸ್ತಕ್ಷೇಪಕ್ಕೆ ಸೂಕ್ತವಾದ ಪ್ರಕರಣವೆಂದು ನಾವು ಕಂಡುಕೊಂಡಿದ್ದೇವೆ. ವಿದ್ಯಾರ್ಥಿಯೊಬ್ಬನ ದೂರಿನ ಆಧಾರದ ಮೇಲೆ ಮತ್ತೊಬ್ಬ ವಿದ್ಯಾರ್ಥಿಯನ್ನು ಬೈಯುವುದರಿಂದ ಅಥವಾ ಗದರಿಸುವುದರಿಂದ, ಆತ ತನ್ನ ಪ್ರಾಣವನ್ನೇ ಕಳೆದುಕೊಳ್ಳುತ್ತಾನೆ. ಇಂತಹ ದುರಂತ ಉಂಟಾಗುತ್ತದೆ ಎಂದು ಯಾವುದೇ ಸಾಮಾನ್ಯ ವ್ಯಕ್ತಿ ಊಹಿಸಲು ಸಾಧ್ಯವಿಲ್ಲ' ಎಂದು ಪೀಠ ಹೇಳಿದೆ.

ಮೃತ ವಿದ್ಯಾರ್ಥಿಯ ಬಗ್ಗೆ ಮತ್ತೊಬ್ಬ ವಿದ್ಯಾರ್ಥಿ ಮಾಡಿದ ದೂರನ್ನು ಅಂಗೀಕರಿಸಿ ಸಮಸ್ಯೆಯನ್ನು ಸರಿಪಡಿಸುವ ಸಲುವಾಗಿ ಮಾತ್ರವೇ ವಿದ್ಯಾರ್ಥಿಯನ್ನು ಗದರಿಸಲಾ ಯಿತು. ಇದನ್ನು ಹೊರತುಪಡಿಸಿ ಆರೋಪಿಗೆ ಬೇರೆ ಯಾವುದೇ ಉದ್ದೇಶ ಇರಲಿಲ್ಲ ಎಂದು ಸುಪ್ರೀಂ ಕೋರ್ಟ್ ಹೇಳಿದೆ.

ಪ್ರಕರಣದ ಸತ್ಯಗಳ ಆಧಾರದ ಮೇಲೆ, ಆರೋಪಿ (ಮೇಲ್ಮನವಿ ಸಲ್ಲಿಸಿದವರು) ಯಾವುದೇ ತಪ್ಪು ಕೃತ್ಯ ಎಸಗುವ ಉದ್ದೇಶ ಹೊಂದಿಲ್ಲ. ಆದ್ದರಿಂದ, ಮೃತರ ಆತ್ಮಹತ್ಯೆಗೆ ಪ್ರಚೋದನೆ ನೀಡಿದ್ದಾರೆ ಎನ್ನುವ ಆರೋಪಕ್ಕೆ ಆರೋಪಿಯೇ ಕಾರಣ ಎಂದು ಸೂಚಿಸಲು ಯಾವುದೇ ಪುರಾವೆಗಳಿಲ್ಲ ಎಂದು ನ್ಯಾಯಾಲಯ ಹೇಳಿದೆ.

ಆರೋಪಿ ತನ್ನ ವಕೀಲರ ಮೂಲಕ ತನ್ನ ಕ್ರಮಗಳು ಸಮರ್ಥನೀಯವೆಂದು ವಾದಿಸಿದ್ದು, ಮೃತ ವ್ಯಕ್ತಿಯು ಮತ್ತೆ ಅಪರಾಧ ಮಾಡದಂತೆ ತಡೆಯಲು ಮತ್ತು ಹಾಸ್ಟೆಲ್‌ನಲ್ಲಿ ಶಾಂತಿ ಮತ್ತು ಸಾಮರಸ್ಯವನ್ನು ಕಾಪಾಡಿಕೊಳ್ಳಲು ರಕ್ಷಕನಾಗಿ ತಾನು ಕೇವಲ ವಾಗ್ದಂಡನೆ ಮಾತ್ರ ಮಾಡಿದ್ದೇನೆ. ತನ್ನ ಮತ್ತು ಮೃತ ವ್ಯಕ್ತಿಯ ನಡುವೆ ಯಾವುದೇ ವೈಯಕ್ತಿಕ ಸಂಬಂಧವಿಲ್ಲ ಎಂದಿದ್ದಾರೆ.

# ಈಶಾನ್ಯ ಭಾರತದಲ್ಲಿ ಭೂಕುಸಿತ, ಪ್ರವಾಹ: 24 ಮಂದಿ ಸಾವು

**ಗುವಾಹಟಿ,ಜೂ.02–** ಕಳೆದ 24 ಗಂಟೆಗಳಲ್ಲಿ ಈಶಾನ್ಯ ರಾಜ್ಯಗಳಲ್ಲಿ ಭಾರಿ ಮಳೆಯಿಂದ ಪ್ರವಾಹ, ಭೂಕುಸಿತ ಮತ್ತು ವ್ಯಾಪಕ ಹಾನಿ ಸಂಭವಿಸಿದ್ದು, ಕನಿಷ್ಠ 24 ಜನರು ಮೃತಪಟ್ಟಿದ್ದಾರೆ. ಮುಂಬರುವ ದಿನಗಳಲ್ಲಿ ಹೆಚ್ಚಿನ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತ ಹವಾಮಾನ ಇಲಾಖೆ (ಖಒಆ) ರಾಜ್ಯಗಳಿಗೆ ರೆಡ್ ಅಲರ್ಟ್ ಘೋಷಿಸಿದ್ದು, ಮುಂಬರುವ ದಿನಗಳಲ್ಲಿ ಹೆಚ್ಚಿನ ಮಳೆಯಾಗುವ ಸಾಧ್ಯತೆ ಇದೆ ಎಂದು ಎಚ್ಚರಿಸಿದೆ.



ಅಧಿಕಾರಿಗಳ ಪ್ರಕಾರ, ನಿನ್ನೆ ಶನಿವಾರ 18 ಸಾವುಗಳು ವರದಿಯಾಗಿವೆ – ಅರುಣಾಚಲ ಪ್ರದೇಶದಿಂದ ಒಂಬತ್ತು, ಅಸ್ಸಾಂನಿಂದ ಐದು ಮತ್ತು ಮಿಜೋರಾಂನಿಂದ ನಾಲ್ಕು. ಶುಕ್ರವಾರ, ಆರು ಜನರು ಮೃತಪಟ್ಟಿದ್ದಾರೆ.

ಮೇಘಾಲಯದಲ್ಲಿ ಮೂರು ಮತ್ತು ನಾಗಾಲ್ಯಾಂಡ್, ಮಿಜೋರಾಂ ಮತ್ತು ತ್ರಿಪುರದಲ್ಲಿ ತಲಾ ಒಬ್ಬರು. ಅರುಣಾಚಲ ಪ್ರದೇಶದ ಅಧಿಕಾರಿಗಳು ಭೂಕುಸಿತ ಸಂಭವಿಸಿ ತಮ್ಮ ವಾಹನವು ಆಳವಾದ ಕಂದಕಕ್ಕೆ ಬಿದ್ದಾಗ ಏಳು ಜನರು ಮೃತಪಟ್ಟಿದ್ದು, ನಾಲ್ವರು ಮಕ್ಕಳು ಮತ್ತು ಇಬ್ಬರು ಗರ್ಭಿಣಿಯರು ಸೇರಿದಂತೆ ಮೃತರು ಎರಡು ಕುಟುಂಬಗಳಿಗೆ ಸೇರಿದವರಾಗಿದ್ದಾರೆ.

ಪೂರ್ವ ಕಾಮೆಂಗ್ ಜಿಲ್ಲೆಯ ಬನಾ-ಸೆಪ್ಪಾ ರಸ್ತೆಯಲ್ಲಿ ಶುಕ್ರವಾರ ತಡರಾತ್ರಿ ಬಲಿಯಾದವರು ಬನಾದಿಂದ ಪೂರ್ವ ಕಾಮೆಂಗ್ ಜಿಲ್ಲಾ ಕೇಂದ್ರವಾದ ಸೆಪ್ಪಾಗೆ ಪ್ರಯಾಣಿಸುತ್ತಿದ್ದರು. ರಾತ್ರಿಯಿಡೀ ಪ್ರಯತ್ನದ ನಂತರ ರಕ್ಷಣಾ ತಂಡಗಳು ಎಲ್ಲಾ ಶವಗಳನ್ನು ಹೊರತೆಗೆದವು. ರಾಜ್ಯದ ಲೋವರ್ ಸುಬನ್ಸಿರಿ ಜಿಲ್ಲೆಯಲ್ಲಿ ಸಂಭವಿಸಿದ ಮತ್ತೊಂದು ಭೂಕುಸಿತ ಘಟನೆಯಲ್ಲಿ ಇಬ್ಬರು ಕಾರ್ಮಿಕರು ಮೃತಪಟ್ಟಿದ್ದಾರೆ. ಇನ್ನಿಬ್ಬರನ್ನು ರಕ್ಷಿಸಲಾಗಿದೆ. ಜಿರೋ-ಕಮ್ಲೆ ರಸ್ತೆಯಲ್ಲಿ ಈ ಘಟನೆ ಸಂಭವಿಸಿದೆ. ರಾಜ್ಯದ ಹಲವಾರು ಜಿಲ್ಲೆಗಳಲ್ಲಿ ಧಾರಾಕಾರ ಮಳೆಯಾಗಿದೆ. ಅಪ್ಪರ್ ಸುಬನ್ಸಿರಿ ಜಿಲ್ಲೆಯಿಂದ ವ್ಯಾಪಕ ಹಾನಿ ಸಂಭವಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಮಿಜೋರಾಂನಲ್ಲಿ, ಚಂಫೈ ಜಿಲ್ಲೆಯಲ್ಲಿ ಸಂಭವಿಸಿದ ಹಠಾತ್ ಪ್ರವಾಹದಲ್ಲಿ ಒಂದೇ ಕುಟುಂಬದ ಐದು ಸದಸ್ಯರು ಕೊಚ್ಚಿ ಹೋಗಿದ್ದಾರೆ. ಇಬ್ಬರನ್ನು ನಂತರ ರಕ್ಷಿಸಲಾಯಿತು, ಮೂವರು ಪ್ರಾಣ ಕಳೆದುಕೊಂಡರು. ಬಲಿಪಶುಗಳು ಮ್ಯಾನ್ಮಾರ್‌ನಿಂದ ಬಂದ ನಿರಾಶ್ರಿತರು ಎಂದು ಹೇಳಲಾಗಿದೆ.

ಸೆರ್ಚಿಪ್‌ನಲ್ಲಿ ನಡೆದ ಮತ್ತೊಂದು ಘಟನೆಯಲ್ಲಿ, ಮನೆ ಕುಸಿದು ಒಬ್ಬ ವ್ಯಕ್ತಿ ಮೃತಪಟ್ಟಿದ್ದಾರೆ. ಲಾಂಗ್ಟ್ಲೈ ಜಿಲ್ಲೆಯಲ್ಲೂ ಹಲವಾರು ಭೂಕುಸಿತಗಳು ಸಂಭವಿಸಿವೆ, ಇದರಲ್ಲಿ ಒಂದು ಹೋಟೆಲ್ ಮತ್ತು ಕೆಲವು ಮನೆಗಳು ಕುಸಿದಿವೆ. ಹೋಟೆಲ್‌ನ ಅವಶೇಷಗಳಲ್ಲಿ ಸಿಲುಕಿಕೊಂಡ ಇಬ್ಬರನ್ನು ರಕ್ಷಿಸಲಾಯಿತು.

ಅಸ್ಸಾಂನ ಗುವಾಹಟಿಯ ಮೂರು ಪ್ರದೇಶಗಳಲ್ಲಿ ಭೂಕುಸಿತ ಸಂಭವಿಸಿದ್ದು, ಮಕ್ಕಳು ಸೇರಿದಂತೆ ಐದು ಜನರು ಮೃತರಾಗಿದ್ದಾರೆ ಎಂದು ಅಸ್ಸಾಂ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರವು ಬುಲೆಟಿನ್‌ನಲ್ಲಿ ತಿಳಿಸಿದೆ. ಗುವಾಹಟಿಯಲ್ಲಿನ ರಸ್ತೆಗಳು ನದಿಗಳಾಗಿ ಮಾರ್ಪಟ್ಟಿದ್ದು, ವಾಹನ ಸಂಚಾರಕ್ಕೆ ಅಡ್ಡಿಯುಂಟುಮಾಡಿದೆ ಮತ್ತು ದೈನಂದಿನ ಜೀವನವನ್ನು ಅಸ್ತವ್ಯಸ್ತಗೊಳಿಸಿದೆ.

ಗುವಾಹಟಿ ಮತ್ತು ಸಿಲ್ಚಾರ್ ನಗರ ಪ್ರದೇಶಗಳಲ್ಲಿ ಭಾರೀ ಮಳೆಯಿಂದಾಗಿ ನಗರ ಪ್ರದೇಶಗಳಲ್ಲಿ ಪ್ರವಾಹದ ನೀರಿನ ತ್ವರಿತ ಏರಿಕೆಯೊಂದಿಗೆ 10,000 ಕ್ಕೂ ಹೆಚ್ಚು ಜನರ ಮೇಲೆ ಪರಿಣಾಮ ಬೀರುತ್ತದೆ. ಸ್ಥಳಾಂತರಗೊಂಡವರಿಗಾಗಿ ಹಲವಾರು ಪರಿಹಾರ ಶಿಬಿರಗಳನ್ನು ಸ್ಥಾಪಿಸಲಾಗಿದೆ.


ಕಾಮ್ರೂಪ್, ಕಾಮ್ರೂಪ್ ಮೆಟ್ರೋ ಮತ್ತು ಕ್ಯಾಚರ್ ಸೇರಿದಂತೆ ಮೂರು ಜಿಲ್ಲೆಗಳ ಐದು ಕಂದಾಯ ವೃತ್ತಗಳು ನಗರ ಪ್ರವಾಹದಿಂದ ಪ್ರಭಾವಿತವಾಗಿವೆ. 10,150 ಜನ ಬಾಧಿತರಾಗಿದ್ದಾರೆ ಮತ್ತು ಎರಡು ಪರಿಹಾರ ಶಿಬಿರಗಳನ್ನು ಸ್ಥಾಪಿಸಲಾಗಿದೆ. ಕಳೆದ 24 ಗಂಟೆಗಳಲ್ಲಿ ಕಾಮ್ರೂಪ್ ಮೆಟ್ರೋದಲ್ಲಿ ಭೂಕುಸಿತದಿಂದಾಗಿ ಐದು ಸಾವುಗಳು ವರದಿಯಾಗಿವೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಮಿಜೋರಾಂನ ಶಿಕ್ಷಣ ಸಂಸ್ಥೆಗಳು ಗುರುವಾರದಿಂದ ಮುಚ್ಚಲ್ಪಟ್ಟಿವೆ. ಅದೇ ರೀತಿ, ಗುವಾಹಟಿಯಲ್ಲಿ ಶಾಲೆಗಳು ಮತ್ತು ಕಾಲೇಜುಗಳು ಶನಿವಾರವೂ ಮುಚ್ಚಲ್ಪಟ್ಟಿವೆ.

ತಮೆಂಗ್ಲಾಂಗ್, ಉಖ್ರುಲ್, ನೊನಿ ಮತ್ತು ಫೆರ್ಜಾಲ್‌ನ ಬೆಟ್ಟದ ಜಿಲ್ಲೆಗಳಿಂದ ಭೂಕುಸಿತದ ಘಟನೆಗಳು ವರದಿಯಾಗಿವೆ ಎಂದು ಮಣಿಪುರ ಸರ್ಕಾರ ತಿಳಿಸಿದೆ.

ಕಳೆದ ನಾಲ್ಕು ದಿನಗಳಿಂದ ನಿರಂತರ ಮಳೆಯ ನಂತರ, ನಂಬುಲ್, ಇರಿಲ್ ಮತ್ತು ನಂಬೋಲ್‌ನಂತಹ ಇತರ ಪ್ರಮುಖ ನದಿಗಳ ನೀರಿನ ಮಟ್ಟವು ಎಚ್ಚರಿಕೆಯ ಮಟ್ಟದಲ್ಲಿ ಹರಿಯುತ್ತಿದೆ.

# ದ್ವೇಷ ಭಾಷಣ ಆರೋಪ: ಉತ್ತರಪ್ರದೇಶ ವಿಧಾನಸಭೆ ಶಾಸಕ ಸ್ಥಾನದಿಂದ ಮುಖ್ತಾರ್ ಅನ್ಸಾರಿ ಪುತ್ರ ಅಬ್ಬಾಸ್ ಅನ್ಸಾರಿ ಉಚ್ಚಾಟನೆ

**ಲಖನೌ,ಜೂ.01–** ಉತ್ತರಪ್ರದೇಶದ ಮೌ ಸದರ್ ಕ್ಷೇತ್ರದ ಶಾಸಕರಾಗಿದ್ದ ಅಬ್ಬಾಸ್ ಅನ್ಸಾರಿ ತಮ್ಮ ಶಾಸಕ ಸದಸ್ಯತ್ವವನ್ನು ಕಳೆದುಕೊಂಡಿದ್ದಾರೆ. ಅಧಿಕಾರಿಗಳಿಗೆ ಬೆದರಿಕೆ ಹಾಕಿದ ಪ್ರಕರಣದಲ್ಲಿ ಮಾಜಿ ಶಾಸಕ ಮುಖ್ತಾರ್ ಅನ್ಸಾರಿ ಪುತ್ರ ಅಬ್ಬಾಸ್ ಅನ್ಸಾರಿಗೆ ಸಂಸದ-ಶಾಸಕ ನ್ಯಾಯಾಲಯವು 2 ವರ್ಷಗಳ ಶಿಕ್ಷೆ ವಿಧಿಸಿದೆ. ಈಗ ಶಿಕ್ಷೆ ವಿಧಿಸಿದ ಬೆನ್ನಲ್ಲೆ ಅಬ್ಬಾಸ್ ಅನ್ಸಾರಿ ವಿಧಾನಸಭೆಯ ಸದಸ್ಯತ್ವವೂ ಕೊನೆಗೊಂಡಿದೆ.



ಯುಪಿ ವಿಧಾನಸಭೆಯ ಪ್ರಧಾನ ಕಾರ್ಯದರ್ಶಿ ಪ್ರದೀಪ್ ದುಬೆ ಅವರು ಮೌ ಸದರ್ ವಿಧಾನಸಭಾ ಸ್ಥಾನ ಖಾಲಿಯಾಗಿದೆ ಎಂದು ಘೋಷಿಸಿ ಚುನಾವಣಾ ಆಯೋಗಕ್ಕೆ ಮಾಹಿತಿ ನೀಡಿದ್ದಾರೆ. ಭಾನುವಾರ ರಜಾದಿನವಾಗಿದ್ದರೂ ಕಚೇರಿಯನ್ನು ಓಪನ್ ಮಾಡಿ ಆಯೋಗಕ್ಕೆ ಪತ್ರವನ್ನು ಕಳುಹಿಸಲಾಯಿತು. ಅಂದರೆ, ಈಗ ಮೌ ಸದರ್ ಸ್ಥಾನದಲ್ಲಿ ವಿಧಾನಸಭಾ ಉಪಚುನಾವಣೆ ನಡೆಯಲಿದೆ.

ಮೌ ವಿಧಾನಸಭಾ ಕ್ಷೇತ್ರವನ್ನು 1996ರಿಂದ ಅನ್ಸಾರಿ ಕುಟುಂಬವೇ ತನ್ನ ಹಿಡಿದಲ್ಲಿಟ್ಟುಕೊಂಡಿದೆ. 1996ರಲ್ಲಿ ಬಹುಜನ ಸಮಾಜ ಪಕ್ಷದ ಟಿಕೆಟ್‌ನಲ್ಲಿ ಮುಖ್ತಾರ್ ಅನ್ಸಾರಿ ಮೊದಲ ಬಾರಿಗೆ ಮೌ ಸದರ್‌ನಿಂದ ಗೆದ್ದರು. ಅದಾದ ನಂತರ ಅವರು ಸತತ ನಾಲ್ಕು ಬಾರಿ ಶಾಸಕರಾಗಿ ಮರು ಆಯ್ಕೆಯಾದರು. ಇದರಲ್ಲಿ, ಅಬ್ಬಾಸ್ ಅನ್ಸಾರಿ ಎರಡು ಬಾರಿ ಸ್ವತಂತ್ರ ಅಭ್ಯರ್ಥಿಯಾಗಿ ಮತ್ತು ಒಮ್ಮೆ ತಮ್ಮ ಪಕ್ಷದ ಕ್ವಾಮಿ ಏಕ್ತಾ ದಳದ ಟಿಕೆಟ್‌ನಲ್ಲಿ ಶಾಸಕರಾಗಿ ಆಯ್ಕೆಯಾದರು. 2017ರ ವಿಧಾನಸಭಾ ಚುನಾವಣೆಯಲ್ಲಿ, ಅಬ್ಬಾಸ್ ಅನ್ಸಾರಿ ಬಹುಜನ ಸಮಾಜ ಪಕ್ಷದಿಂದ ಟಿಕೆಟ್‌ನಲ್ಲಿ ಸ್ಪರ್ಧಿಸಿ ಗೆದ್ದರು.

ಆದಾಗ್ಯೂ, 2022ರ ವಿಧಾನಸಭಾ ಚುನಾವಣೆಯಲ್ಲಿ ಮುಖ್ತಾರ್ ಅನ್ಸಾರಿ ಜೈಲಿನಲ್ಲಿದ್ದು ಅವರು ತಮ್ಮ ಮಗನನ್ನು ಅಲ್ಲಿಂದಲೇ ಅಭ್ಯರ್ಥಿಯನ್ನಾಗಿ ಮಾಡಿದರು. ಸುಹೇಲ್‌ದೇವ್ ಭಾರತೀಯ ಸಮಾಜ ಪಕ್ಷದ ಟಿಕೆಟ್ ಪಡೆದು ಅಬ್ಬಾಸ್ ಅನ್ಸಾರಿ ಗೆದ್ದಿದ್ದರು. ಸುಹೇಲ್‌ದೇವ್ ಭಾರತೀಯ ಸಮಾಜ ಪಕ್ಷವು ಸಮಾಜವಾದಿ ಪಕ್ಷದೊಂದಿಗೆ ಮೈತ್ರಿ ಹೊಂದಿತ್ತು. ಆದಾಗ್ಯೂ, ಈಗ ಸುಹೇಲ್‌ದೇವ್ ಭಾರತೀಯ ಸಮಾಜ ಪಕ್ಷವು ಓಆಂ ಸೇರಿದೆ.

ನ್ಯಾಯಾಲಯವು ಅಬ್ಬಾಸ್ ಅನ್ಸಾರಿ ಅವರನ್ನು ಭಾರತೀಯ ದಂಡ ಸಂಹಿತೆಯ ಸೆಕ್ಷನ್ 189, 153ಂ, 171ಈ ಮತ್ತು 506 ರ ಅಡಿಯಲ್ಲಿ ತಪ್ಪಿತಸ್ಥರೆಂದು ತೀರ್ಪು ನೀಡಿದೆ. ಅಬ್ಬಾಸ್ ಅನ್ಸಾರಿಗೆ ಸೆಕ್ಷನ್ 189 ಮತ್ತು 153ಂ ಅಡಿಯಲ್ಲಿ 2 ವರ್ಷಗಳ ಶಿಕ್ಷೆ ವಿಧಿಸಲಾಗಿದೆ. 171ಈ ಅಡಿಯಲ್ಲಿ 6 ತಿಂಗಳ ಶಿಕ್ಷೆ ಮತ್ತು ಸೆಕ್ಷನ್ 506 ಅಡಿಯಲ್ಲಿ 1 ವರ್ಷದ ಶಿಕ್ಷೆ ವಿಧಿಸಲಾಗಿದೆ. ಈ ಎಲ್ಲಾ ಶಿಕ್ಷೆಗಳು ಏಕಕಾಲದಲ್ಲಿ ಜಾರಿಯಲ್ಲಿರುತ್ತವೆ ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ.

ಅಂತಹ ಪರಿಸ್ಥಿತಿಯಲ್ಲಿ, ಅಬ್ಬಾಸ್ ಅನ್ಸಾರಿ 2 ವರ್ಷಗಳ ನಂತರ ಜೈಲಿನಿಂದ ಬಿಡುಗಡೆಯಾಗಲಿದ್ದಾರೆ. ಅದೇ ಸಮಯದಲ್ಲಿ, ಅಬ್ಬಾಸ್ ಅನ್ಸಾರಿ ಕಿರಿಯ ಸಹೋದರ ಉಮರ್ ಅನ್ಸಾರಿ ಅವರನ್ನು ಈ ಪ್ರಕರಣದಲ್ಲಿ ಆರೋಪಿಯನ್ನಾಗಿ ಮಾಡಲಾಯಿತು. ಅವರನ್ನು ನ್ಯಾಯಾಲಯವು ಖುಲಾಸೆಗೊಳಿಸಿತು.

2022ರ ವಿಧಾನಸಭಾ ಚುನಾವಣಾ ಪ್ರಚಾರದ ಸಮಯದಲ್ಲಿ ಅಬ್ಬಾಸ್ ಅನ್ಸಾರಿ ವಿವಾದಾತ್ಮಕ ಹೇಳಿಕೆ ನೀಡಿದ್ದರು. ಅವರು ಪ್ರಚೋದನಕಾರಿ ಭಾಷಣ ಮಾಡಿದರು. ಅಧಿಕಾರಿಗಳಿಗೆ ಬೆದರಿಕೆ ಹಾಕಿದರು. ಈ ಸಂಬಂಧ ಮೌದಲ್ಲಿನ ಕೊಟ್ವಾಲಿ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಯಿತು.

# ಆಪರೇಷನ್ ಸಿಂಧೂರ ಕುರಿತು ಪ್ರಬಂಧ ಸ್ಪರ್ಧೆ ಏರ್ಪಡಿಸಿದ ರಕ್ಷಣಾ ಸಚಿವಾಲಯ; ವಿಜೇತರಿಗೆ ನಗದು ಬಹುಮಾನ




ನವದೆಹಲಿ,ಜೂ.02– ಜೂನ್ 1 ರಿಂದ 30ರವರೆಗೆ 'ಆಪರೇಷನ್ ಸಿಂಧೂರ' ವಿಷಯದ ಮೇಲೆ ಪ್ರಬಂಧ ಸ್ಪರ್ಧೆಯನ್ನು ರಕ್ಷಣಾ ಸಚಿವಾಲಯ ಭಾನುವಾರ ಪ್ರಕಟಿಸಿದೆ.

ಘಿ ನಲ್ಲಿನ ಪೋಸ್ಟ್‌ನಲ್ಲಿ ಸಚಿವಾಲಯವು, ಅಗ್ರ ಮೂರು ವಿಜೇತರಿಗೆ ತಲಾ 10,000 ರೂ. ನಗದು ಬಹುಮಾನ ನೀಡಲಾಗುವುದು ಮತ್ತು ದೆಹಲಿಯ ಕೆಂಪು ಕೋಟೆಯಲ್ಲಿ ನಡೆಯುವ 78ನೇ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಭಾಗವಹಿಸಲು ವಿಶೇಷ ಅವಕಾಶ ಪಡೆಯುತ್ತಾರೆ ಎಂದು ತಿಳಿಸಿದೆ.

ಏಪ್ರಿಲ್ 22ರಂದು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ 26 ಜನರು ಸಾವಿಗೀಡಾಗಿದ್ದಕ್ಕೆ ಪ್ರತೀಕಾರವಾಗಿ ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದಲ್ಲಿನ ಒಂಬತ್ತು ಭಯೋತ್ಪಾದಕ ನೆಲಗಳನ್ನು ಗುರಿಯಾಗಿಸಿ ಮೇ 7ರಂದು ಆಪರೇಷನ್ ಸಿಂಧೂರವನ್ನು ಪ್ರಾರಂಭಿಸಲಾಯಿತು.

ಭಯೋತ್ಪಾದನೆಯ ವಿರುದ್ಧ ಭಾರತ 'ಹೊಸ ಕೆಂಪು ರೇಖೆ'ಯನ್ನು ಎಳೆದಿದೆ ಎಂದು ನರೇಂದ್ರ ಮೋದಿ ನೇತೃತ್ವದ ಸರ್ಕಾರ ಹೇಳಿದೆ. ಭಯೋತ್ಪಾದನೆಗೆ, ವಿಶೇಷವಾಗಿ ಗಡಿಯಾಚೆಗಿನ ಭಯೋತ್ಪಾದನೆಗೆ ಭಾರತ ಹೇಗೆ ಪ್ರತಿಕ್ರಿಯಿಸುತ್ತದೆ ಎಂಬುದರಲ್ಲಿ ಆಪರೇಷನ್ ಸಿಂಧೂರ ಇದೀಗ ಉದಾಹರಣೆಯಾಗಿದೆ ಎಂದು ಪ್ರತಿಪಾದಿಸಿದೆ.ರಕ್ಷಣಾ ಸಚಿವಾಲಯವು ತಮ್ಮ ಧ್ವನಿಯನ್ನು ಕೇಳುವಂತೆ ಮಾಡಲು ಯುವ ಮನಸ್ಸುಗಳನ್ನು ಆಹ್ವಾನಿಸುತ್ತದೆ 'ಆಪರೇಷನ್ ಸಿಂಧೂರ – ಭಯೋತ್ಪಾದನೆಯ ವಿರುದ್ಧ ಭಾರತದ ನೀತಿಯನ್ನು ಮರು ವ್ಯಾಖ್ಯಾನಿಸುವುದು' ಎಂಬ ವಿಷಯ ಕುರಿತು ರಕ್ಷಣಾ ಸಚಿವಾಲಯ ಮತ್ತು ಭಾರತ ಸರ್ಕಾರದ ದ್ವಿಭಾಷಾ ಪ್ರಬಂಧ ಸ್ಪರ್ಧೆಯಲ್ಲಿ ಭಾಗವಹಿಸಿ' ಎಂದು ಸಚಿವರು ಘಿ ನಲ್ಲಿ ಪೋಸ್ಟ್ ಮಾಡಿದ್ದಾರೆ.ಜೂನ್ 1 ರಿಂದ 30ರವರೆಗೆ ಸ್ಪರ್ಧೆ ನಡೆಯಲಿದೆ. ಯಾವುದೇ ವ್ಯಕ್ತಿ ಹಿಂದಿ ಅಥವಾ ಇಂಗ್ಲಿಷ್‌ನಲ್ಲಿ ಪ್ರಬಂಧ ಬರೆಯಬಹುದಾಗಿದೆ ಎಂದು ಅದು ಹೇಳಿದೆ. ಸ್ಪರ್ಧೆಯ ಬಗ್ಗೆ ವಿವರಗಳು ಮತ್ತು ಆಪರೇಷನ್ ಸಿಂಧೂರದ ಲೋಗೋ ಹೊಂದಿರುವ ಪೋಸ್ಟರ್ ಅನ್ನು ಸಹ ಹಂಚಿಕೊಂಡಿದೆ.

.........ಮೊದಲನೇ ಪುಟದಿಂದ

## ಆಲಮಟ್ಟಿ ಅಣೆಕಟ್ಟು ಎತ್ತರ ಹೆಚ್ಚಳಕ್ಕೆ ಮಹಾರಾಷ್ಟ್ರ ಸಿಎಂ ತಗಾದೆ ರಾಜ್ಯದ ಹಿತರಕ್ಷಣೆಗೆ ಕೇಂದ್ರ ಸಚಿವರು, ಸಂಸದರಿಗೆ ಮನವಿ; ಡಿಕೆಶಿ

ಸರ್ಕಾರ ಸಿದ್ಧವಿದೆ. ಮಹಾರಾಷ್ಟ್ರ ಸಿಎಂ ಹಾಗೂ ಅದಕ್ಕೆ ನಮ್ಮ ಸಿಎಂ ಬರೆಯುವ ಪತ್ರವನ್ನು ಎಲ್ಲಾ ಸಂಸದರಿಗೆ ರವಾನಿಸುತ್ತೇವೆ.

ನ್ಯಾಯಾಧಿಕರಣ ತೀರ್ಪಿನ ಅನ್ವಯ ನಮ್ಮ ಪಾಲಿನ ನೀರನ್ನು ಪಡೆಯಲು ಆಲಮಟ್ಟಿ ಅಣೆಕಟ್ಟನ್ನು 524 ಮೀಟರ್ ಗೆ ಎತ್ತರಿಸುವ ಯೋಜನೆ ವಿಚಾರವಾಗಿ ನಾನು ಹಾಗೂ ಮುಖ್ಯಮಂತ್ರಿಗಳು ಕೇಂದ್ರ ಸಚಿವರನ್ನು ಭೇಟಿ ಮಾಡಿದ್ದೆವು. ಈ ಬಗ್ಗೆ ಸಭೆ ಕರೆದು ಚರ್ಚೆ ಮಾಡಿ ಅಧಿಸೂಚನೆ ಹೊರಡಿಸಿ ಎಂದು ಮನವಿ ಮಾಡಿದ್ದೆವು" ಎಂದರು.

"ಕೇಂದ್ರ ಸಚಿವರು ನಮ್ಮ ಮನವಿ ಪರಿಗಣಿಸಿ ಸಭೆಗೆ ದಿನಾಂಕ ನಿಗದಿ ಮಾಡಿದ್ದರು. ಹೀಗಾಗಿ ನಾನು ಸಚಿವರು, ಕಾನೂನು ತಜ್ಞರು ಹಾಗೂ ಆ ಭಾಗದ ಶಾಸಕರ ಜತೆ ಆಂತರಿಕ ಸಭೆ ಮಾಡಿ ಸಲಹೆ ಪಡೆದಿದ್ದೆ. ಸಭೆಗೆ ತೆರಳುವಾಗ ಈ ಸಭೆ ಮುಂದೂಡಲಾಗಿದೆ ಎಂದು ಸಂದೇಶ ಬಂದಿತು. ಯುದ್ಧದ ವಾತಾವರಣ ಹಿನ್ನೆಲೆಯಲ್ಲಿ ಮುಂದೂಡಿಕೆಯಾಗಿರಬಹುದು ಎಂದು ಭಾವಿಸಿದ್ದೆ" ಎಂದು ತಿಳಿಸಿದರು.

## ಗೃಹ ಆರೋಗ್ಯ ಯೋಜನೆ' ರಾಜ್ಯಾದ್ಯಂತ ವಿಸ್ತರಣೆ; ನಿಮ್ಮ ಮನೆ ಬಾಗಿಲಿಗೆ ಉಚಿತ ಆರೋಗ್ಯ ಸೇವೆ

ಚಾಲನೆ ನೀಡಿದ್ದರು.

ಇದರ ಯಶಸ್ಸಿನ ನಂತರ, ಇದೀಗ ಈ ಯೋಜನೆಯನ್ನು ಕರ್ನಾಟಕದ ಎಲ್ಲಾ ಜಿಲ್ಲೆಗಳಿಗೆ ವಿಸ್ತರಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

"ಆರಂಭದಲ್ಲಿ 30 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ವಯಸ್ಸಿನ ವ್ಯಕ್ತಿಗಳಲ್ಲಿ ಪ್ರಮುಖ ಓಅಆ ಗಳಿಗೆ ತಪಾಸಣೆ ನಡೆಸಲಾಯಿತು. ಅದರಲ್ಲಿ ಪ್ರಮುಖವಾಗಿ ಮಧುಮೇಹ, ಅಧಿಕ ರಕ್ತದೊತ್ತಡ, ಬಾಯಿ, ಸ್ತನ ಮತ್ತು ಗರ್ಭಕಂಠ ಕ್ಯಾನ್ಸರ್ ರೋಗಗಳ ತಪಾಸಣೆ ಮತ್ತು ನಿರ್ವಹಣೆಯನ್ನು ನಡೆಸಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

ಆಶಾ ಕಾರ್ಯಕರ್ತೆಯರು ಪ್ರತಿ ಮನೆ ಮನೆಗೆ ತೆರಳಿ ಜನರಲ್ಲಿ ಅಸಾಂಕ್ರಾಮಿಕ ರೋಗಗಳ ಕುರಿತು ಜಾಗೃತಿ ಮೂಡಿಸುವುದರ ಜೊತೆಗೆ ಆಯುಷ್ಮಾನ್ ಆರೋಗ್ಯ ಮಂದಿರಗಳಲ್ಲಿ ಸಮುದಾಯ ಆರೋಗ್ಯಾಧಿಕಾರಿಗಳ ಮೂಲಕ ತಪಾಸಣಾ ಕಾರ್ಯಕ್ಕೆ ನೆರವಾಗುವರು. ಸಮುದಾಯ ಆರೋಗ್ಯ ಅಧಿಕಾರಿಗಳು ತಪಾಸಣೆ ನಡೆಸಿ ಓಅಆ ಪೋರ್ಟಲ್ ನಲ್ಲಿ ಡೇಟಾ ನಮೂದಿಸಲಿದ್ದು, ರಕ್ತದೊತ್ತಡ, ಡಯಾಬಿಟಿಸ್ ಹೊಂದಿದವರಿಗೆ ಸ್ಥಳದಲ್ಲೇ ಔಷಧಿಗಳನ್ನ ಉಚಿತವಾಗಿ ಒದಗಿಸುವ ವ್ಯವಸ್ಥೆಯನ್ನ ಗೃಹ ಆರೋಗ್ಯ ಯೋಜನೆಯಲ್ಲಿ ಕಲ್ಪಿಸಲಾಗಿದೆ.

ಇಂದು ವಿಕಾಸಸೌಧದಲ್ಲಿ ಗೃಹ ಆರೋಗ್ಯ ಯೋಜನೆ ಅನುಷ್ಠಾನ ಕುರಿತ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು, ಗೃಹ ಆರೋಗ್ಯ ಯೋಜನೆ ರಾಜ್ಯದಾದ್ಯಂತ ವಿಸ್ತರಣೆಯಾಗುತ್ತಿದ್ದು, ಯೋಜನೆಯಡಿ 14 ಅಸಾಂಕ್ರಾಮಿಕ ರೋಗಗಳ ತಪಾಸಣೆ ಕೈಗೆತ್ತಿಕೊಳ್ಳಲಾಗಿದೆ ಎಂದು ಹೇಳಿದರು.

ಅಸಾಂಕ್ರಾಮಿಕ ರೋಗಗಳು ಜನರ ಜೀವಕ್ಕೆ ಅಪಾಯ ತಂದೊಡ್ಡಿವೆ. ಖಾಸಗಿ ಆರೋಗ್ಯ ವಯಲದಲ್ಲಿ ಚಿಕಿತ್ಸೆಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತದೆ. ಆದರೆ ಅಸಾಂಕ್ರಾಮಿಕ ರೋಗಗಳನ್ನು ಮುಂಚಿತವಾಗಿಯೇ ತಡೆಗಟ್ಟುವುದು ಮುಖ್ಯ. ಈ ಕಾರ್ಯವನ್ನ ಸರ್ಕಾರವೇ ಮಾಡಬೇಕು ಹೊರತಾಗಿ ಬೇರೆ ಯಾರು ಆಸಕ್ತಿ ತೋರುವುದಿಲ್ಲ. ಹೀಗಾಗಿ ಒಂದು ಜವಾಬ್ದಾರಿಯುತ ಸರ್ಕಾರವಾಗಿ ಆರೋಗ್ಯ ಇಲಾಖೆಯಿಂದ ಅಸಾಂಕ್ರಾಮಿಕ ರೋಗಗಳನ್ನ ತಡೆಗಟ್ಟುವತ್ತ ಗೃಹ ಆರೋಗ್ಯ ಯೋಜನೆಯನ್ನ ರಾಜ್ಯಾದ್ಯಂತ ವಿಸ್ತರಿಸಲಾಗುತ್ತಿದೆ. ಎಲ್ಲ ಮನೆಗಳಲ್ಲಿ 30 ವರ್ಷ ಮೇಲ್ಪಟ್ಟವರನ್ನ ತಪಾಸಣೆಗೆ ಒಳಪಡಿಸಿ, ಸೂಕ್ತ ಔಷಧಗಳನ್ನ ಅವರ ಬಳಿಗೆ ತಲುಪಿಸುವ ಕಾರ್ಯ ಪ್ರಾರಂಭಿಸಲಾಗುತ್ತಿದೆ ಎಂದು ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ಗೃಹ ಆರೋಗ್ಯ ಯೋಜನೆಯನ್ನು ಮೊದಲು ಕೋಲಾರ ಜಿಲ್ಲೆಯಲ್ಲಿ ಮಾತ್ರ ಪ್ರಾರಂಭಿಸಿದಾಗ ಹಲವು ಸಂಗತಿಗಳು ಬೆಳಕಿಗೆ ಬಂದವು. ಅವೆಲ್ಲವನ್ನ ತುಲನೆ ಮಾಡಿ ಯೋಜನೆಯಲ್ಲಿ ಒಂದಿಷ್ಟು ಬದಲಾವಣೆಗಳನ್ನ ತರಲಾಗಿದೆ. ಆಶಾ ಕಾರ್ಯಕರ್ತರಯರಿಂದ ಹಿಡಿದು ಸಮುದಾಯ ಆರೋಗ್ಯ ಅಧಿಕಾರಿಗಳಿಗೆ ಜವಾಬ್ದಾರಿಗಳನ್ನು ವಹಿಸಿ, ಸ್ಪಷ್ಟ ಮಾಹಿತಿಯುಳ್ಳ ಕೈಪಿಡಿ ನೀಡಿದ್ದೇವೆ. ತಪಾಸಣೆ ಬಳಿಕ ರೋಗಿಗಳ ಮೇಲ್ವಿಚಾರಣೆ ಕೂಡ ನಡೆಯಬೇಕು. ಆ ನಿಟ್ಟಿನಲ್ಲಿ ವ್ಯವಸ್ಥಿತವಾಗಿ ಯಾರು ಏನು ಮಾಡಬೇಕು ಎಂಬ ಸ್ಪಷ್ಟ ಚಿತ್ರಣವನ್ನ ಆರೋಗ್ಯ ಸಿಬ್ಬಂದಿಗಳಿಗೆ ನೀಡಲಾಗಿದೆ ಎಂದರು.

## ರಾಜ್ಯದ ಕೆಲವು ಭಾಗಗಳನ್ನು ದ್ವೇಷದ ಪ್ರಯೋಗಾಲಯಗಳನ್ನಾಗಿ ಮಾಡುತ್ತಿದೆ BJP-RSS: ಪ್ರಿಯಾಂಕ್ ಖರ್ಗೆ

ಪ್ರೀತಿಯನ್ನು ವರ್ಣಿಸಲು ನನ್ನಲ್ಲಿ ಪದಗಳಿಲ್ಲ.

ನನ್ನ ಮೇಲಿನ ಪ್ರತಿ ದಾಳಿಗೂ ಸಾವಿರಾರು ವಿರೋಧದ ಧ್ವನಿಗಳು ಅನುರಣಿಸುತ್ತವೆ, ಕೀಳು ತಂತ್ರಗಳಿಗೆ ಎದಿರೇಟು ನೀಡುವ ಜನಶಕ್ತಿ ನನ್ನೊಂದಿಗೆ ಇದೆ ಎಂಬುದನ್ನು ಮನುವಾದಿಗಳಿಗೆ ಮನವರಿಕೆ ಮಾಡಿದ್ದೀರಿ. ನಾವೆಲ್ಲರೂ ಬಾಬಾ ಸಾಹೇಬರ ಆದರ್ಶಗಳು, ಸಂವಿಧಾನದ ತತ್ವಗಳನ್ನು ಪಾಲಿಸುವವರು. ನಮ್ಮ ಹೋರಾಟಗಳು ಸತ್ಯದ ಪರವಾಗಿರುತ್ತದೆ. ಆಚಾರವಿಲ್ಲದ ನಿಮ್ಮ ನಾಲಿಗೆ ಆಡುವ ಹೊಲಸು ಮಾತುಗಳಿಂದ ನಮ್ಮನ್ನು ಹಣಿಯಲು ಸಾಧ್ಯವಿಲ್ಲ ಎಂಬುದನ್ನು ಮನುಸ್ಮೃತಿ ಆರಾಧಕರಿಗೆ ಮತ್ತೊಮ್ಮೆ ಅರ್ಥಮಾಡಿಸಿದ್ದೀರಿ.

ಸಮಾಜದ ಸ್ವಾಸ್ಥ್ಯ ಕೆಡಿಸುವ ಮನುವಾದದ ಮನಸ್ಥಿತಿಯವರ ಕುತಂತ್ರಗಳು ಸಫಲವಾಗುವುದಿಲ್ಲ. ಪ್ರಿಯಾಂಕ್ ಖರ್ಗೆ ಒಂಟಿಯಲ್ಲ, ನನ್ನೊಂದಿಗೆ ಬಾಬಾ ಸಾಹೇಬರನ್ನು ಅನುಸರಿಸುವ ಹಾಗೂ ಬಸವಣ್ಣನನ್ನು ಆರಾಧಿಸುವ ಸಾವಿರಾರು ಪಡೆಗಳಿವೆ ಎನ್ನುವ ಸಂಗತಿ ನನ್ನಲ್ಲಿ ಮತ್ತಷ್ಟು ಶಕ್ತಿ, ಆತ್ಮವಿಶ್ವಾಸ ತುಂಬಿದೆ. ನಿಮ್ಮೆಲ್ಲರ ಈ ಪ್ರೀತಿ, ಈ ಅಭಿಮಾನ, ಈ ಅಭೂತಪೂರ್ವ ಬೆಂಬಲವು ನನ್ನಲ್ಲಿ ಮತ್ತಷ್ಟು ಶಕ್ತಿ ತುಂಬಿದೆ, ಸಾಮಾಜಿಕ ಪಿಡುಗಿನಂತಾಗಿರುವ ಮನುವಾದಿಗಳನ್ನು ಎದುರಿಸುವ ಕೆಲಸವನ್ನು ನಿಮ್ಮೆಲ್ಲರ ಬೆಂಬಲದೊಂದಿಗೆ ನಾನು ಮುಂದುವರೆಸುತ್ತಲೇ ಇರುತ್ತೇನೆ, ಅಸಹಾಯಕರ, ಶೋಷಿತರ ಏಳಿಗೆಗಾಗಿ ನನ್ನ ಪ್ರಾಮಾಣಿಕ ಪ್ರಯತ್ನವನ್ನು ಮುಂದುವರೆಸುತ್ತಿರುತ್ತೇನೆಂದು ತಿಳಿಸಿದ್ದಾರೆ.

ಇದೇ ವೇಳೆ ಕೇಂದ್ರ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿರುವ ಅವರು, ಅಮೆರಿಕದ ಹಿತಾಸಕ್ತಿಗಳಿಗೆ ಅನುಗುಣವಾಗಿ ಭಾರತದ ವಿದೇಶಾಂಗ ನೀತಿಯಲ್ಲಿ ರಾಜಿ ಮಾಡಿಕೊಳ್ಳಲಾಗಿದೆಯೇ ಎಂದು ಪ್ರಶ್ನಿಸಿದ್ದಾರೆ.

ಪ್ರಧಾನಿ ಮೋದಿ ಒಮ್ಮೆ ತಮ್ಮ "ಸ್ನೇಹಿತ" ಎಂದು ಕರೆದಿದ್ದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಈಗ ಕಾಶ್ಮೀರ ವಿಷಯದ ಬಗ್ಗೆ ಏಕೆ ಪ್ರತಿಕ್ರಿಯಿಸುತ್ತಿದ್ದಾರೆ? ಕಾಶ್ಮೀರ ನಮ್ಮ ಆಂತರಿಕ ವಿಚಾರ ಎಂದು ಮೋದಿಯವರೇ ಒತ್ತಿ ಹೇಳಿದ್ದರು. ಇದೀಗ ಸರ್ಕಾರವೇಕೆ ಅಂತರರಾಷ್ಟ್ರೀಯಗೊಳಿಸುತ್ತಿದೆ?

ಪ್ರಧಾನಿ ಮೋದಿ ಇದರ ಬಗ್ಗೆ ಮೌನವಾಗಿದ್ದಾರೇಕೆ? ಸಾರ್ವಭೌಮ ರಾಷ್ಟ್ರವಾಗಿ ನಮ್ಮ ದೇಶದ ವಿದೇಶಾಂಗ ನೀತಿಯನ್ನು ಅಮೆರಿಕಕ್ಕೆ ಅಡವಿಡಲಾಗಿದೆಯೇ ಎಂದು ಪ್ರಶ್ನಿಸಿದ್ದಾರೆ. ಇದೇ ವೇಳೆ ಆಡಳಿತ ಪಕ್ಷದ ಸದಸ್ಯರು ಆಗಾಗ್ಗೆ ಮಾಡುವ ವಿದೇಶ ಪ್ರವಾಸಗಳ ಕುರಿತಂತೆಯೂ ಪ್ರಶ್ನೆ ಮಾಡಿದ್ದಾರೆ.ಹಲವು ದೇಶಗಳಿಗೆ ಹೋಗಿರುವವರೆಲ್ಲರೂ, ಆ ರಾಷ್ಟ್ರಗಳ ಮುಖ್ಯಸ್ಥರನ್ನು ಅಥವಾ ಸರ್ಕಾರದ ಮುಖ್ಯಸ್ಥರನ್ನು ಭೇಟಿಯಾಗುತ್ತಿದ್ದಾರೆಯೇ? ಅವರು ನಿಜವಾಗಿಯೂ ಯಾರನ್ನು ಭೇಟಿಯಾಗುತ್ತಿದ್ದಾರೆ? ಎಂದು ಪ್ರಶ್ನಿಸಿದ್ದಾರೆ.ಬಿಜೆಪಿ ಹಾಗೂ ಆರ್'ಎ???ಸ್ ಕರಾವಳಿ ಕರ್ನಾಟಕ, ಮಲೆನಾಡು, ಹುಬ್ಬಳ್ಳಿ-ಧಾರವಾಡ ಮತ್ತು ಬೆಳಗಾವಿ ಸೇರಿದಂತೆ ಕರ್ನಾಟಕದ ಕೆಲವು ಭಾಗಗಳನ್ನು ದ್ವೇಷದ ಪ್ರಯೋಗಾಲಯಗಳನ್ನಾಗಿ ಪರಿವರ್ತಿಸುತ್ತಿವೆ.

"ಸಂಘ ಪರಿವಾರ ಮತ್ತು ಅದರ ಅಂಗಸಂಸ್ಥೆಗಳು ಎಂದಿಗೂ ಉದ್ಯೋಗಗಳನ್ನು ಸೃಷ್ಟಿಸಲು ಆದ್ಯತೆ ನೀಡಿಲ್ಲ, ಬದಲಿಗೆ ದ್ವೇಷವನ್ನು ಹರಡುವತ್ತ ಗಮನಹರಿಸಿವೆ. ವಿಪರ್ಯಾಸವೆಂದರೆ ಅವರು ತಮ್ಮ ಮಕ್ಕಳನ್ನು ಈ ದ್ವೇಷದ ಜಾಲದಲ್ಲಿ ಸಿಲುಕಿಸುತ್ತಿಲ್ಲ. ಬದಲಿಗೆ ಬಡವರ ಮತ್ತು ಹಿಂದುಳಿದವರ ಮಕ್ಕಳನ್ನು ರವಾನಿಸುತ್ತಿದ್ದಾರೆಂದು ಕಿಡಿಕಾರಿದ್ದಾರೆ.

## ಕನ್ನಡ ಸಹಿಷ್ಣು ಭಾಷೆ: 8 ಜ್ಞಾನಪೀಠ, 1 ಬೂಕರ್ ಪ್ರಶಸ್ತಿ, ಇದು ಕನ್ನಡದ ತಾಕತ್ತು; ಕಮಲ್ ಹಾಸನ್‌ಗೆ ಬಾನು ಮುಷ್ತಾಕ್ ತಿರುಗೇಟು

ಭಾಷೆ ಹೊಂದಿದೆ ಎಂದು ಮುಷ್ತಾಕ್ ಹೇಳಿದರು.

ತಮಿಳಿನಿಂದ ಕನ್ನಡ ಹುಟ್ಟಿತು ಎಂದು ನಟ ಕಮಲ್ ಹಾಸನ್ ಹೇಳಿಕೆಗೆ ರಾಜ್ಯದಲ್ಲಿ ಆಕ್ರೋಶ ಭುಗಿಲೆದ್ದಿದೆ. ಕಮಲ್ ಅಭಿನಯದ ಥಗ್ ಲೈಫ್ ಚಿತ್ರವನ್ನು ನಿಷೇಧಿಸಬೇಕು ಎಂದು ಕನ್ನಡಪರ ಸಂಘಟನೆಗಳು, ಬಿಜೆಪಿ ಒತ್ತಾಯಿಸುತ್ತಿವೆ. ಈ ಮಧ್ಯೆ ಕನ್ನಡದ ಗರಿಮೆಯನ್ನು ತಿಳಿಸುವ ಮೂಲಕ ಬಾನು ಮುಷ್ತಾಕ್ ಅವರು ಕಮಲ್ ಹಾಸನ್ ಗೆ ಪರೋಕ್ಷವಾಗಿ ತಿರುಗೇಟು ನೀಡಿದ್ದಾರೆ.

## ದೇಶಕ್ಕಾಗಿ ರಾಜೀವ್ ಪ್ರಾಣ ಬಿಟ್ಟರು; ಸೋನಿಯಾ ಎರಡು ಬಾರಿ PM ಹುದ್ದೆ ತ್ಯಾಗ; ಕಾಂಗ್ರೆಸ್ ಪಕ್ಷಕ್ಕಿದೆ ದೊಡ್ಡ ಇತಿಹಾಸ: DKS



ಬೆಂಗಳೂರು: ಬೆಂಗಳೂರಿನ ಅಭಿವೃದ್ಧಿಗೆ ಕಾಂಗ್ರೆಸ್ ಸರ್ಕಾರಗಳ ಕೊಡುಗೆಯೇ ಹೆಚ್ಚು. ಬೆಂಗಳೂರಿನ ಸಮಗ್ರ ಅಭಿವೃದ್ಧಿಗೆ ನಮ್ಮ ಸರ್ಕಾರ 1 ಲಕ್ಷ ಕೋಟಿ ಮೊತ್ತದ ದೊಡ್ಡ ಯೋಜನೆಗಳನ್ನು ಹಮ್ಮಿಕೊಂಡಿದೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ದಾಸರಹಳ್ಳಿ ವಿಧಾನಸಭಾ ಕ್ಷೇತ್ರದ ಮುಖಂಡರು ಹಾಗೂ ಕಾರ್ಯಕರ್ತರ ಸಭೆಯಲ್ಲಿ ಕೆಪಿಸಿಸಿ ಅಧ್ಯಕ್ಷರೂ ಆದ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಮಾತನಾಡಿದರು. ಕಳೆದ 20 ವರ್ಷಗಳಲ್ಲಿ ಬೆಂಗಳೂರು ಜನತೆ 70 ಲಕ್ಷದಿಂದ 1.50 ಕೋಟಿಗೆ ಏರಿಕೆಯಾಗಿದೆ. ಹೀಗಾಗಿ ಬೆಂಗಳೂರಿನ ಅಭಿ ವೃದ್ಧಿಗೆ ಮುಂದಿನ ಮೂರ್ನಾಲ್ಕು ವರ್ಷಗಳಲ್ಲಿ 1 ಲಕ್ಷ ಕೋಟಿ ಮೊತ್ತದ ಯೋಜನೆ ರೂಪಿಸಿದ್ದೇವೆ.

ನಿಮ್ಮ ಕ್ಷೇತ್ರದಲ್ಲಿ ಹಾದು ಹೋಗುವ ನೆಲಮಂಗಲ ಮೇಲ್ಸೇತುವೆ ಬಿಜೆಪಿಯವರು ಮಾಡಿದ್ದಲ್ಲ, ಕೃಷ್ಣ ಭೈರೇಗೌಡ ಅವರ ಕ್ಷೇತ್ರದಲ್ಲಿ ವಿಮಾನ ನಿಲ್ದಾಣಕ್ಕೆ ಹೋಗುವ ಮೇಲ್ಸೇತುವೆ, ಹೊಸೂರು ರಸ್ತೆಯಲ್ಲಿರುವ ಮೇಲ್ಸೇತುವೆ, ಕೋಲಾರಕ್ಕೆ ಡಬಲ್ ರೋಡ್ ಮಾಡಿದ್ದು ಮನಮೋಹನ್ ಸಿಂಗ್ ಅವರ ಸರ್ಕಾರದಲ್ಲಿ. ಬೆಂಗಳೂರಿನಲ್ಲಿ ಇಂತಹ ಯಾವುದೇ ಕಾರ್ಯಕ್ರಮ ವಿದ್ದರೂ ಅದು ಕಾಂಗ್ರೆಸ್ ಸರ್ಕಾರದ ಕೊಡುಗೆಯೇ ವಿನಃ ಬಿಜೆಪಿ ಸರ್ಕಾರವಲ್ಲ" ಎಂದು ತಿಳಿಸಿದರು.

"ಬೆಂಗಳೂರು ಬೆಳೆಯುತ್ತಿದೆ. ಹೀಗಾಗಿ ನಾವು ಗ್ರೇಟರ್ ಬೆಂಗಳೂರು ಪ್ರಾಧಿಕಾರ ರಚನೆ ಮಾಡಿದ್ದೇವೆ. ಇದರಲ್ಲಿ ಎಷ್ಟು ಪಾಲಿಕೆ ಮಾಡಬೇಕು ಎಂದು ಚರ್ಚೆ ಮಾಡಲು ಸಚಿವರು ಹಾಗೂ ಶಾಸಕರ ಸಭೆ ಮಾಡಿದ್ದೇನೆ. ಇನ್ನೊಂದು ವಾರದಲ್ಲಿ ಮತ್ತೊಂದು ಸಭೆ ಮಾಡಿ ಅಂತಿಮ ತೀರ್ಮಾನ ಮಾಡಲಾಗುವುದು. ಪಾಲಿಕೆ ರಚಿಸಿ, ಪ್ರಜಾ ಪ್ರಭುತ್ವ ವ್ಯವಸ್ಥೆಯಲ್ಲಿ ಚುನಾವಣೆಯನ್ನು ಮಾಡುತ್ತೇವೆ. ಹೊಸ ಪಾಲಿಕೆ ಸದಸ್ಯರು ಆಯ್ಕೆಯಾಗಬೇಕು.

ಮುಂದೆ ದಾಸರಹಳ್ಳಿಯಲ್ಲಿ ಶಾಸಕ ಹಾಗೂ ಕಾರ್ಪೊರೇಟರ್ ಸ್ಥಾನಗಳು ಕಾಂಗ್ರೆಸ್ ಪಕ್ಷಕ್ಕೆ ಎಂಬ ನಂಬಿಕೆ ಇದೆ" ಎಂದು ತಿಳಿಸಿದರು. "ರಾಜ್ಯದಲ್ಲಿ ಉದ್ಯೋಗ ಸೃಷ್ಟಿಸಲು ಇತ್ತೀಚೆಗೆ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶ ಮಾಡಿದೆವು. ಅದರಲ್ಲಿ 10 ಲಕ್ಷ ಕೋಟಿ ಬಂಡವಾಳ ಹೂಡಿಕೆ ಒಪ್ಪಂದವಾಗಿವೆ" ಎಂದರು.

ಕಳೆದ ವಿಧಾನಸಭೆ ಚುನಾವಣೆಗೂ ಮುನ್ನ ಮಾಜಿ ಶಾಸಕ ಮಂಜುನಾಥ್ ಗೆ ಎಲ್ಲಾ ರೀತಿ ಹೇಳಿದೆ. ಕಮಲ ಕೆರೆಯಲ್ಲಿದ್ದರೆ ಚೆಂದ, ತೆನೆ ಹೊಲದಲ್ಲಿದ್ದರೆ ಚೆಂದ, ದಾನ ಧರ್ಮ ಮಾಡುವ ಕೈ, ಅಧಿಕಾರದಲ್ಲಿದ್ದರೆ ಚೆಂದ ಎಂದು ಹೇಳಿದ್ದೆ. ಮಂಜಣ್ಣ ನನ್ನ ಮಾತು ಕೇಳಿದ್ದರೆ, ನನ್ನ ಹಾಗೂ ಕೃಷ್ಣ ಭೈರೇಗೌಡ ಅವರ ಮಧ್ಯೆ ವಿಧಾನಸೌಧದಲ್ಲಿ ಕೂರುತ್ತಿದ್ದರು. ಮಂಜಣ್ಣ ಇಲ್ಲಿ ಶಾಸಕರಾಗಿ ಗೆದ್ದಿದ್ದು, ತನ್ನ ಸಾಮರ್ಥ್ಯದ ಮೇಲೆ ಹೊರತು ಜೆಡಿಎಸ್ ಪಕ್ಷದಿಂದ ಅಲ್ಲ ಎಂದರು.

ಈಗ ಆಗಿಹೋಗಿರುವುದನ್ನು ಬಿಟ್ಟು, ಮುಂಬರುವ 2028ರ ಚುನಾವಣೆಯಲ್ಲಿ ನೀವು ಮಂಜಣ್ಣ ಅವರನ್ನು ವಿಧಾನ ಸೌಧದಲ್ಲಿ ಕೂರಿಸಬೇಕು. ನಮ್ಮ ಸರ್ಕಾರ ಈ ದೇಶಕ್ಕೆ ಮಾದರಿ. ಬಿಜೆಪಿ ಭಾವನೆ ಮೇಲೆ ರಾಜಕೀಯ ಮಾಡಿದರೆ, ನಾವು ಬದುಕಿನ ಮೇಲೆ ರಾಜಕೀಯ ಮಾಡುತ್ತೇವೆ.

ನಮಗೆ ನಿಮ್ಮ ಬದುಕು ಮುಖ್ಯ. ನಿಮಗೆ ಪ್ರತಿ ತಿಂಗಳು ಕನಿಷ್ಠ 5 ಸಾವಿರ ಉಳಿತಾಯ ಆದರೆ ನಿಮಗೆ ಅನುಕೂಲವಾಗುತ್ತದೆ ಎಂಬ ಉದ್ದೇಶದಿಂದ ನಾವು ಗ್ಯಾರಂಟಿ ಯೋಜನೆ ಜಾರಿಗೆ ತಂದೆವು. ಬೆಲೆ ಏರಿಕೆ ಸಮಸ್ಯೆಯಿಂದ ಜನರನ್ನು ರಕ್ಷಣೆ ಮಾಡಲಾಗಿದೆ" ಎಂದು ವಿವರಿಸಿದರು.

"ರಾಜ್ಯದಲ್ಲಿ ಬಿಜೆಪಿ ಸರ್ಕಾರ ನಾಲ್ಕು ವರ್ಷ ಅಧಿಕಾರದಲ್ಲಿತ್ತು. ಬಿಜೆಪಿ ಇಂತಹ ಒಂದೇ ಒಂದು ಯೋಜನೆಯನ್ನು ನೀಡಲಿಲ್ಲ. ನಿಮ್ಮ ಶಾಸಕರು ಕೇವಲ ಬರಿ ಮಾತಲ್ಲೇ ನಿಮಗೆ ಮರಳು ಮಾಡುತ್ತಿದ್ದಾರೆ. ಖಾಲಿ ಡಬ್ಬಾದಂತೆ ಕೇವಲ ಸದ್ದು ಮಾತ್ರ ಮಾಡುತ್ತಾರೆ. ಮಂಜಣ್ಣ ಇಲ್ಲಿ ಸೋತಿದ್ದರು.

8 ಸಾವಿರ ಕುಟುಂಬಗಳ ಆಸ್ತಿಯನ್ನು ಇ ಖಾತಾ ಮಾಡುಸಿದ್ದಾರೆ. ನಮ್ಮ ಪಾಲಿಗೆ ಇಲ್ಲಿ ಮಂಜುನಾಥ್ ಅವರೇ ಶಾಸಕರು. ಅವರು ಹೇಳಿದಂತೆ ನಾವು ಕೇಳುತ್ತೇವೆ. ನಿಮ್ಮ ಆಸ್ತಿ ದಾಖಲೆ ಸರಿಪಡಿಸಿ, ಅದನ್ನು ನಿಮ್ಮ ಮನೆಬಾಗಿಲಿಗೆ ಉಚಿತ ವಾಗಿ ತಲುಪಿಸುವ ಐತಿಹಾಸಿಕ ತೀರ್ಮಾನ ಮಾಡಿದ್ದೇವೆ" ಎಂದರು.

"ಕಾಂಗ್ರೆಸ್ ಪಕ್ಷ ಸದಾ ಜನರ ಬದುಕಿನ ಬಗ್ಗೆ ಆಲೋಚನೆ ಮಾಡುತ್ತಿದೆ. ಕಾಂಗ್ರೆಸ್ ಪಕ್ಷಕ್ಕೆ ಅದರದೇ ಇತಿಹಾಸವಿದೆ. ಇತ್ತೀಚೆಗೆ ದೇಶದಲ್ಲಿ ಯುದ್ಧದ ವಾತಾವರಣ ಸೃಷ್ಟಿಯಾಗಿತ್ತು. ಈ ಸಂದರ್ಭದಲ್ಲಿ ಜನ ಇಂದಿರಾ ಗಾಂಧಿ ಅವರನ್ನು ಸ್ಮರಿಸುತ್ತಿದ್ದರು. ಇಂದಿರಾ ಗಾಂಧಿ ಇದ್ದಿದ್ದರೆ ದೇಶವನ್ನು ಹೇಗೆ ಮುನ್ನಡೆಸುತ್ತಿದ್ದರು ಎಂದು ಜನ ಆಲೋಚನೆ ಮಾಡಿದರು" ಎಂದರು."ದೇಶಕ್ಕಾಗಿ ಇಂದಿರಾ ಗಾಂಧಿ, ರಾಜೀವ್ ಗಾಂಧಿ ಅವರು ದೇಶಕ್ಕಾಗಿ ಪ್ರಾಣ ಬಿಟ್ಟರು. ಸೋನಿಯಾ ಗಾಂಧಿ ಅವರು ಈ ದೇಶಕ್ಕಾಗಿ ಪ್ರಧಾನಮಂತ್ರಿ ಸ್ಥಾನವನ್ನು ಎರಡು ಬಾರಿ ತ್ಯಾಗ ಮಾಡಿದರು. ಇದು ಕಾಂಗ್ರೆಸ್ ಪಕ್ಷದ ಶಕ್ತಿ. ಬಿಜೆಪಿಯಲ್ಲಿ ಇಂತಹ ತ್ಯಾಗ ಮಾಡಿರುವವರು ಒಬ್ಬರಾದರೂ ಇದ್ದಾರಾ?" ಎಂದು ಪ್ರಶ್ನಿಸಿದರು.

## ಸರ್ಕಾರದ ಬಜೆಟ್ ಗಿಂತ ಖಾಸಗಿ ವಿಮೆ ಪ್ರೀಮಿಯಂ ಅಧಿಕ: ಬಡವರಿಗೆ ಆರೋಗ್ಯ ಸೇವೆ ಗಗನಕುಸುಮ

ನಿಗದಿಪಡಿಸಿದ ಶೇಕಡಾ 2.5 ಗುರಿಗಿಂತ ಕಡಿಮೆಯಾಗಿದೆ.

**ಹೆಲ್ತ್ ಇನ್ಶೂರೆನ್ಸ್ ನಿಂದ ಆರೋಗ್ಯ ಸೌಲಭ್ಯ ವೆಚ್ಚ ಅಧಿಕ**

ಈ ಪ್ರವೃತ್ತಿ ಬಜೆಟ್ ಬದಲಾವಣೆಗಿಂತ ಹೆಚ್ಚಿನದನ್ನು ಸೂಚಿಸುತ್ತದೆ – ಇದು ಭಾರತದಲ್ಲಿ ಆರೋಗ್ಯ ರಕ್ಷಣೆ ಹೇಗೆ ಮಹತ್ವ ಪಡೆದುಕೊಂಡಿದೆ ಎಂಬುದರಲ್ಲಿ ರಚನಾತ್ಮಕ ರೂಪಾಂತರವನ್ನು ಪ್ರತಿಬಿಂಬಿಸುತ್ತದೆ. ಖಾಸಗಿ ವಿಮೆಯ ಮೇಲಿನ ಹೆಚ್ಚುತ್ತಿರುವ ಅವಲಂಬನೆಯು ಮಾರುಕಟ್ಟೆ-ಚಾಲಿತ ಮಾದರಿಯತ್ತ ಗಮನ ಹರಿಸುತ್ತದೆ.

ಖಾಸಗಿ ವಿಮಾ ಯೋಜನೆಗಳು ಹೆಚ್ಚಾಗಿ ಕವರೇಜ್ ನ್ನು ಹೊಂದಿರುವುದಿಲ್ಲ, ಸಹ-ಪಾವತಿಗಳು ಮತ್ತು ಕ್ಲೈಮ್ ಕ್ಯಾಪ್‌ಗಳೊಂದಿಗೆ ಬರುತ್ತವೆ, ಇದು ಹೆಚ್ಚಿನ ವೈದ್ಯಕೀಯ ವೆಚ್ಚಗಳಿಂದ ವ್ಯಕ್ತಿಗಳನ್ನು ರಕ್ಷಿಸುವಲ್ಲಿ ವಿಫಲವಾಗಿವೆ. ಅನೇಕ ಪಾಲಿಸಿಗಳಲ್ಲಿ ಹೊರರೋಗಿ ಆರೈಕೆ ಸೌಲಭ್ಯವಿರುವುದಿಲ್ಲ. ಇದು ಬಡ ರೋಗಿಗಳ ಆರೋಗ್ಯ ಸೌಲಭ್ಯದ ಮೇಲೆ ಪರಿಣಾಮ ಬೀರುತ್ತಿವೆ.

ವಿಮೆಯು ಆರೋಗ್ಯ ರಕ್ಷಣೆಗೆ ಎಂದು ಹೇಳುತ್ತಿದ್ದರೂ ಕೂಡ, ಸಾರ್ವಜನಿಕ ಆರೋಗ್ಯ ವ್ಯವಸ್ಥೆಯನ್ನು ಬದಲಿಸಲು ಸಾಧ್ಯವಾಗುತ್ತಿಲ್ಲ, ಹಲವು ರೋಗಗಳ ಚಿಕಿತ್ಸೆಗೆ ವಿಮಾ ಸೌಲಭ್ಯ ಒಳಗೊಳ್ಳದಿರುವುದು, ಅತ್ಯಂತ ದುರ್ಬಲರನ್ನು ಹೊರಗಿಡುವುದು ಮತ್ತು ಆರೋಗ್ಯವನ್ನು ಸಾರ್ವಜನಿಕ ಉತ್ತಮ ಆರೈಕೆಯಾಗಿ ನೋಡದಿರುವುದು ದೌರ್ಭಾಗ್ಯವೇ ಸರಿ ಎನ್ನುತ್ತಾರೆ ತಜ್ಞರು.

## ಹಟ್ಟಿ ಚಿನ್ನದ ಗಣಿಯಲ್ಲಿ ಮಣ್ಣು ಕುಸಿದು ಕಾರ್ಮಿಕ ಸಾವು: ಮೃತನ ಕುಟುಂಬಕ್ಕೆ 1 ಕೋಟಿ ರೂ. ಪರಿಹಾರ ನೀಡಲು ಆಗ್ರಹ

ಪನ್ನಕೆಲ್ಲೂರು (22) ಅವರನ್ನು ಮೊದಲು ಹಟ್ಟಿ ಚಿನ್ನದ ಗಣಿ ಕಂಪನಿ ಆಸ್ಪತ್ರೆಗೆ ದಾಖಲಿಸಲಾಯಿತು ಮತ್ತು ನಂತರ ಬೆಳಗಾವಿಗೆ ಸ್ಥಳಾಂತರಿಸಲಾಯಿತು.

ಘಟನೆಯ ನಂತರ, ಕಾರ್ಮಿಕರು ಕೆಲಸವನ್ನು ನಿಲ್ಲಿಸಿ ಸರಿಯಾದ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಲಾಗಿಲ್ಲ ಎಂದು ಆರೋಪಿಸಿ ಕಂಪನಿ ಕಚೇರಿಯ ಮುಂದೆ ಧರಣಿ ನಡೆಸಿದರು. ಗಣಿಯಲ್ಲಿ ಹೆಚ್ಚಿನ ಪ್ರಮಾಣದ ಅದಿರು ಮತ್ತು ಮಣ್ಣು ಕುಸಿದಿದ್ದರಿಂದ, ಕಂಪನಿಯ ರಕ್ಷಣಾ ತಂಡ, ಅಧಿಕಾರಿಗಳು ಮತ್ತು ಕಾರ್ಮಿಕರು ಶರಣಬಸವ ಅವರ ದೇಹವನ್ನು ಹೊರತೆಗೆಯಲು ಹೆಣಗಾಡಿದರು.

ಹಟ್ಟಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಹಿರಿಯ ಪೊಲೀಸ್ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿದ್ದಾರೆ ಎಂದು ರಾಯಚೂರು ಎಸ್ಪಿ ಪುಟ್ಟಮಾದಯ್ಯ ತಿಳಿಸಿದ್ದಾರೆ. ಕಂಪನಿಯ ಕಾರ್ಯನಿರ್ವಾಹಕ ನಿರ್ದೇಶಕ ಪ್ರಕಾಶ್ ಮತ್ತು ಇತರ ಅಧಿಕಾರಿಗಳು ಅಪಘಾತದ ಸ್ಥಳಕ್ಕೆ ಭೇಟಿ ನೀಡಿದ್ದಾರೆ.

ಕಳೆದ ಬಾರಿ ಇದೇ ರೀತಿಯ ಘಟನೆ ನಡೆದಾಗ ಕಾರ್ಮಿಕರು ಮತ್ತು ಕಂಪನಿ ಆಡಳಿತ ಮಂಡಳಿಯ ನಡುವೆ ಒಪ್ಪಂದದಂತೆ ಮೃತರ ಕುಟುಂಬಕ್ಕೆ 1 ಕೋಟಿ ರೂ. ಪರಿಹಾರ ಮತ್ತು ಅವರ ಕುಟುಂಬದ ಸದಸ್ಯರಲ್ಲಿ ಒಬ್ಬರಿಗೆ ಉದ್ಯೋಗ ನೀಡಬೇಕೆಂದು ಪ್ರತಿಭಟನಾ ನಿರತ ಕಾರ್ಮಿಕರು ಒತ್ತಾಯಿಸಿದರು.

ಮಾಜಿ ಶಾಸಕ ಡಿ.ಎಸ್. ಹುಲಗೇರಿ ಕೂಡ ಕಂಪನಿ ಆವರಣಕ್ಕೆ ಆಗಮಿಸಿ ಮಾಹಿತಿ ಪಡೆದರು. ಮೃತರ ಕುಟುಂಬಕ್ಕೆ 1 ಕೋಟಿ ರೂ. ಪರಿಹಾರ ನೀಡುವಂತೆ ಕಂಪನಿಯ ಮಂಡಳಿ ಮತ್ತು ಅಧ್ಯಕ್ಷರನ್ನು ಕೇಳಲಾಗುವುದು ಎಂದು ಅವರು ಹೇಳಿದರು

## 108 ಅಡಿ ಎತ್ತರದ ವಿಷ್ಣು ವಿಗ್ರಹ: ಬೆಂಗಳೂರಿನ ಈಜಿಪುರದಲ್ಲಿ ಇಂದು ಪ್ರತಿಷ್ಠಾಪನೆ



**ಬೆಂಗಳೂರು,ಜೂ.02–** ವಿಶ್ವದಲ್ಲೇ ಅತಿ ಎತ್ತರದ ವಿಷ್ಣುವಿನ 108 ಅಡಿ ಎತ್ತರದ ಏಕಶಿಲಾ ಪ್ರತಿಮೆಯನ್ನು ಇಂದು ಸೋಮವಾರ ಈಜಿಪುರದಲ್ಲಿ ಪ್ರಾಣ ಪ್ರತಿಷ್ಠೆ ಕಾರ್ಯಕ್ರಮ ನೆರವೇರುತ್ತಿದೆ. ತಮಿಳುನಾಡಿನ ತಿರುವಣ್ಣಾಮಲೈನಿಂದ ಗಣಿಗಾರಿಕೆ ಮಾಡಿದ 420 ಟನ್ ತೂಕದ ಏಕಶಿಲಾ ಕಲ್ಲನ್ನು 2019 ರಲ್ಲಿ 240 ಚಕ್ರಗಳ ಟ್ರಕ್‌ನಲ್ಲಿ ಆರು ತಿಂಗಳ ಅವಧಿಯಲ್ಲಿ ನಗರಕ್ಕೆ ತರಲಾಗಿತ್ತು.

ಏಕಶಿಲಾ ಪ್ರತಿಮೆಯ ಹಿಂದಿನ ವ್ಯಕ್ತಿ ನಿವೃತ್ತ ಸರ್ಕಾರಿ ವೈದ್ಯ ಡಾ. ಬಿ. ಸದಾನಂದ, ಅವರು 2010 ರಲ್ಲಿ ಈ ಕೆಲಸ ಆರಂಭಿಸಿದ್ದರು. ಈ ಪ್ರತಿಮೆಯು ಆಧ್ಯಾತ್ಮಿಕ ಏಕತೆ ಮತ್ತು ಸಾಂಸ್ಕೃತಿಕ ಪರಂಪರೆಯ ಸಂಕೇತವಾಗಿ ಕಾರ್ಯನಿರ್ವಹಿಸಬೇಕೆಂದು ವೈದ್ಯರು ಬಯಸುತ್ತಾರೆ.

ಈ ಅವತಾರದಲ್ಲಿ ಅತ್ಯಂತ ಎತ್ತರ ಪ್ರತಿಮೆ ಎಂದು ಹೇಳಲಾಗುವ ವಿಶ್ವರೂಪ ಪ್ರತಿಮೆಯ ಕೆಲಸ 2010 ರಲ್ಲಿ ಪ್ರಾರಂಭವಾಯಿತು, ಮೊದಲ ಹಂತದಲ್ಲಿ ನಿರ್ಮಾಣ ಪೂರ್ವ ಕೆಲಸ ಮತ್ತು ಮುಖ್ಯ ದೇವರು ಮತ್ತು ಆದಿಶೇಷನ ಶಿಲ್ಪಕಲೆ ಸೇರಿದೆ.ಶಿಲ್ಪಕಲೆಯ ಕೆಲಸ ಪೂರ್ಣಗೊಳಿಸುವಿಕೆ, ಹೊಳಪು ನೀಡುವಿಕೆ, ಕ್ರೇನ್ ಕೆಲಸ, ಪ್ರತಿಮೆಯ ಕಟ್ಟಡ ಚೌಕಟ್ಟು ಮತ್ತು ಇತರ ಸಿವಿಲ್ ಕೆಲಸಗಳನ್ನು ಒಳಗೊಂಡಂತೆ ಪ್ರತಿಮೆಯನ್ನು ಪೂರ್ಣಗೊಳಿಸಲು ಒಟ್ಟು 2.60 ಕೋಟಿ ರೂಪಾಯಿ ವೆಚ್ಚವಾಗಿದೆ.

ಈಜಿಪುರದಲ್ಲಿ ಭಕ್ತರು ವಿಷ್ಣುವಿನ ವಿರಾಟ ಸ್ವರೂಪವನ್ನು ವೀಕ್ಷಿಸಲು ಧಾವಿಸುತ್ತಿದ್ದಾರೆ. ಮೊನ್ನೆ ಶನಿವಾರದಿಂದ ಹೋಮ- ಹವನಗಳು ಆರಂಭಗೊಂಡವು. ಮುಖ್ಯ ಪ್ರಾಣ ಪ್ರತಿಷ್ಠಾ ಹೋಮ ಮತ್ತು ಮಹಾಕುಂಬಾಭಿಷೇಕ (ಪವಿತ್ರೀಕರಣ ಸಮಾರಂಭ) ಇಂದು ನಡೆಯುತ್ತಿದೆ. ಉಡುಪಿಯ ಪೇಜಾವರ ಮಠದ ವಿಶ್ವಪ್ರಸನ್ನ ಮತ್ತು ಮೈಸೂರಿನ ಪರಕಾಲ ಮಠದ ಅಭಿನವ ವಾಗೀಶ್ ಅವರು ಈ ಸಮಾರಂಭದಲ್ಲಿ ಭಾಗವಹಿಸುತ್ತಿದ್ದಾರೆ.ಈ ಶಿಲ್ಪಕಲೆಯು ಈ ರೀತಿ ಕೆತ್ತನೆಯಾಗಿ ಪ್ರಾಣಪ್ರತಿಷ್ಠೆಯಾಗುತ್ತಿರುವುದು ಮೊದಲನೆಯದು ಮತ್ತು ಇದುವರೆಗೆ ಸ್ಥಾಪಿಸಲಾದ ಇತರ ರೀತಿಯ ವಿಷ್ಣು ಪ್ರತಿಮೆಗಳಿಗಿಂತ ಭಿನ್ನವಾಗಿದೆ. ಪರಮಾತ್ಮನ 'ಶಿವ ಕೇಶವ ಸ್ವರೂಪಂ' ಮಹಾ ವಿಷ್ಣು, ಶಿವ, ಬ್ರಹ್ಮ, ಸ್ಕಂದ, ವಿನಾಯಕ, ನರಸಿಂಹ, ಆಂಜನೇಯ, ಗರುಡ, ಅಗ್ನಿ ಮತ್ತು ಋಷಿ ಮುನಿಗಳನ್ನು ಪ್ರತಿನಿಧಿಸುವ ಹಲವಾರು ತೋಳುಗಳು ಮತ್ತು ತಲೆಗಳನ್ನು ಹೊಂದಿದೆ ಎಂದು ಪ್ರಾಜೆಕ್ಟ್ ನಲ್ಲಿ ಭಾಗಿಯಾಗಿದ್ದವರು ಹೇಳಿದರು.ಕೋದಂಡ ರಾಮಸ್ವಾಮಿ ದೇವಸ್ಥಾನ ಚಾರಿಟೇಬಲ್ ಟ್ರಸ್ಟ್ ಈ ಯೋಜನೆಯ ಮೇಲ್ವಿಚಾರಣೆಯನ್ನು ವಹಿಸಿಕೊಂಡಿತ್ತು. ಈ ಪ್ರತಿಮೆ ಹಿಂದೂ ಧರ್ಮದ ಅನುಯಾಯಿಗಳಲ್ಲಿ ಏಕತೆಯನ್ನು ಸೃಷ್ಟಿಸಲು ಸಂಕೇತವಾಗಿದೆ ಎಂದರು.

## ಹುಬ್ಬಳ್ಳಿ: 11 ತಿಂಗಳ ಮಗುವಿಗೆ ಕೊರೋನಾ ಪಾಸಿಟಿವ್

ಹುಬ್ಬಳ್ಳಿ: ರಾಜ್ಯದಲ್ಲಿ ಕೊರೋನಾ ಮಹಾಮಾರಿ ಸೋಂಕು ದಿನೇ ದಿನೇ ಹೆಚ್ಚಾಗುತ್ತಿದ್ದು, ಹುಬ್ಬಳ್ಳಿಯಲ್ಲಿ 11 ತಿಂಗಳ ಮಗುವಿಗೆ ಸೋಂಕು ದೃಢಪಟ್ಟಿದೆ.ಹುಬ್ಬಳ್ಳಿಯ ಬೈರಿದೇವರಕೊಪ್ಪ ಗ್ರಾಮದ 11 ತಿಂಗಳ ಮಗುವಿಗೆ ಕೊರೊನಾ ಸೋಂಕು ಕಾಣಿಸಿಕೊಂಡಿದ್ದು, ಕಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಲಾಗುತ್ತಿದೆ.

ಮಗುವಿಗೆ ಹೃದಯ ಸಂಬಂಧಿ ಕಾಯಿಲೆಗೆ ಚಿಕಿತ್ಸೆ ಕೊಡಿಸಲು ಹೋದಾಗ ಕೋವಿಡ್ ಸೋಂಕು ಇರುವುದು ಪತ್ತೆಯಾಗಿದೆ. ಸದ್ಯ ಮಗುವಿನ ಆರೋಗ್ಯ ಸ್ಥಿರವಾಗಿದೆ ಜಿಲ್ಲಾಧಿಕಾರಿ ದಿವ್ಯಾ ಪ್ರಭು ಮಾಹಿತಿ ನೀಡಿದ್ದಾರೆ.ಆತಂಕ ಪಡುವ ಅಗತ್ಯವಿಲ್ಲ. ಹೆಚ್ಚಿನ ಸಂಖ್ಯೆಯ ಜನರಿಗೆ ಈಗಾಗಲೇ ಲಸಿಕೆ ಹಾಕಲಾಗಿದೆ. ಸೋಂಕು ಉಲ್ಬಣಗೊಳ್ಳುವುದಿಲ್ಲ. ಪ್ರಸ್ತುತ ಆರೋಗ್ಯ ಇಲಾಖೆಯ ಮಾರ್ಗದರ್ಶನದ ಆಧಾರದ ಮೇಲೆ ಪರಿಸ್ಥಿತಿ ನಿಭಾಯಿಸಲಾಗುತ್ತಿದೆ ಎಂದು ಹೇಳಿದರು.ಇದೇ ವೇಳೆ ಸಾರ್ವಜನಿಕರು ಮತ್ತು ವಿಶೇಷವಾಗಿ ಮಕ್ಕಳು ಮಾಸ್ಕ್ ಧರಿಸುವಂತೆ ಮನವಿ ಮಾಡಿದ್ದಾರೆ.. ಶೀತ ಮತ್ತು ಇತರ ಅಲರ್ಜಿಗಳಿಂದ ಬಳಲುತ್ತಿರುವ ಜನರು ಮಾಸ್ಕ್ ಧರಿಸಬೇಕು. ಕೋವಿಡ್ -19 ರ ಉತ್ತುಂಗದಲ್ಲಾದ್ದಾಗ ಅನುಸರಿಸಿದ ಶಿಷ್ಟಾಚಾರವನ್ನು ಅನುಸರಿಸಬೇಕು ಎಂದು ತಿಳಿಸಿದ್ದಾರೆ.

ಜನನಿಬಿಡ ಪ್ರದೇಶಗಳಿಗೆ ಭೇಟಿ ನೀಡುವ ಜನರು ಮಾಸ್ಕ್ ಧರಿಸಬೇಕು. ಇದು ಸೋಂಕು ಹರಡುವುದನ್ನಷ್ಟೇ ತಡೆಯುವುದಲ್ಲದೆ, ಯಾವುದೇ ಅಲರ್ಜಿಗಳು ತಗುಲದಂತೆ ತಡೆಯುತ್ತದೆ. ಸಾಂಕ್ರಾಮಿಕ ರೋಗಗಳು ತಡೆಯದಂತೆಯೂ ಸಹಾಯ ಮಾಡುತ್ತದೆ ಎಂದು ಹೇಳಿದ್ದಾರೆ.

## AICC ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಭೇಟಿಯಾದ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್: ತೀವ್ರ ಕುತೂಹಲ

ಯೋಜನೆಯ ಬಗ್ಗೆ ಮಾಹಿತಿ ಪಡೆದುಕೊಂಡರು. ಅರ್ಹ ಮಹಿಳೆಯರಿಗೆ ಯೋಜನೆಯ ಹಣ ತಲುಪುತ್ತಿದ್ಯಾ, ಇಲಾಖೆಯ ಕಾರ್ಯವೈಖರಿ ಬಗ್ಗೆಯೂ ಕೇಳಿದರು ಎಂದು ತಿಳಿಸಿದರು.

ಇದೇ ವೇಳೆ ಬಾಕಿ ಉಳಿದಿದ್ದ ಏಪ್ರಿಲ್ ತಿಂಗಳ ಗೃಹ ಲಕ್ಷ್ಮಿ ಹಣವನ್ನು ಶೀಘ್ರದಲ್ಲೇ ಫಲಾನುಭವಿಗಳಿಗೆ ವಿತರಿಸಲಾಗುವುದು ಎಂದು ಭರವಸೆ ನೀಡಿದರು.

ಲಕ್ಷ್ಮೀ ಹೆಬ್ಬಾಳ್ಕರ್ ಅವರು ಪಕ್ಷದ ರಾಷ್ಟ್ರೀಯ ಪಕ್ಷದ ಅಧ್ಯಕ್ಷರನ್ನು ಭೇಟಿ ಮಾಡಿ ಅವರ ಆಶೀರ್ವಾದ ಪಡೆದಿರುವುದು ಸಾಮಾನ್ಯವಾದರೂ ನಾಯಕತ್ವ ಬದಲಾವಣೆ ವಿಚಾರ ಮುನ್ನೆಲೆಗೆ ಬಂದಿರುವ ಹಿನ್ನೆಲೆಯಲ್ಲಿ ಹಾಗೂ ಸಚಿವೆ ಡಿಸಿಎಂ ಡಿಕೆ ಶಿವಕುಮಾರ್ ಅವರಿಗೆ ನಿಷ್ಠಾವಂತರು ಎಂದು ಪರಿಗಣಿಸಲಾಗಿರುವುದರಿಂದ ಈ ಭೇಟಿ ಮಹತ್ವ ಪಡೆದುಕೊಂಡಿದೆ.

## ಸಿಂಧೂ ನದಿ ನೀರು ಕುರಿತು ಕ್ಯಾತೆ: ಭಯೋತ್ಪಾದನೆಯಿಂದಾಗಿ ಒಪ್ಪಂದ ರದ್ದಾಯ್ತು ಇತರರ ದೂಷಿಸುವುದು ನಿಲ್ಲಿಸಲಿ: ಪಾಕ್‌ಗೆ ಭಾರತ ತಿರುಗೇಟು

ಭಾರತದ ವಿದೇಶಾಂಗ ವ್ಯವಹಾರಗಳ ರಾಜ್ಯ ಸಚಿವ ಕೀರ್ತಿವರ್ಧನ್ ಸಿಂಗ್ ಅವರು ಮಾತನಾಡಿ, 'ಪಾಕಿಸ್ತಾನವು ಅನಗತ್ಯವಾಗಿ ಅಂತಾರಾಷ್ಟ್ರೀಯ ವೇದಿಕೆ ಯಲ್ಲಿ ಸಿಂಧು ಒಪ್ಪಂದ ವಿಚಾರ ಪ್ರಸ್ತಾಪಿಸಿದೆ. ಸಂಬಂಧಪಡದ ವಿಚಾರ ಪ್ರಸ್ತಾಪಿಸುವ ಮೂಲಕ ಪಾಕಿಸ್ತಾನ ವೇದಿಕೆ ದುರುಪಯೋಗ ಮಾಡಿದೆ. ನಾವು ಕಠಿಣ ಪದಗಳಲ್ಲಿ ಇಂತಹ ಪ್ರಯತ್ನ ಖಂಡಿಸುತ್ತೇವೆ' ಎಂದು ಹೇಳಿದರು.

ಸದ್ಭಾವನೆ ಮತ್ತು ಮಿತ್ರತ್ವದ ಸ್ಫೂರ್ತಿ ಯಿಂದಲೇ ಈ ಒಪ್ಪಂದ ಮಾಡಿಕೊಳ್ಳಲಾಗಿದೆ ಎಂದು ಒಪ್ಪಂದದ ಪೀಠಿಕೆಯೇ ಹೇಳುತ್ತದೆ. ಹೀಗಾಗಿ ಈ ಒಪ್ಪಂದವನ್ನು ಸದ್ಭಾವನೆಯಿಂದ ಗೌರವಿಸುವುದು ಅಗತ್ಯ. ಆದರೆ, ಪಾಕಿಸ್ತಾನ ಭಯೋತ್ಪಾದನೆಗೆ ಪ್ರೋತ್ಸಾಹ ನೀಡುವ ಮೂಲಕ ಈ ಒಪ್ಪಂದ ಉಲ್ಲಂಘಿಸಿದೆ' ಎಂದು ಕಿಡಿಕಾರಿದರು.

Editor:S.K.Wadeyar, #69 "VISPATHI", B,Block S.O.G. Colony Davanagere-577005,Karnataka.
Publisher:S.K.Wadeyar, #69 "VISPATHI", B,Block S.O.G. Colony Davanagere-577005,Karnataka.
Printer:S.K.Wadeyar, SUCHITHRA PRINTERs & PUBLISHERs # 69 "VISPATHI",B,Block S.O.G.Colony Davanagere-577005,Karnataka
Owner:S.K.Wadeyar, #69 "VISPATHI", B,Block S.O.G.Colony, Davanagere-577005,Karnataka